ಸಂಪುಟ: 11 ಸಂಚಿಕೆ: 207 ಪುಟಗಳು: 4+2 ಬೆಲೆ: ₹ 3.00 ಮಂಗಳವಾರ, ಸೆಪ್ಟೆಂಬರ್ 22, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 207 Pages : 4+2 Rate : 3.00 Tuesday, September 22, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ಗಣೇಶನಿಗೆ ಎಚ್.ಕೆ. ಪಾಟೀಲರಿಂದ ವಿಶೇಷ ಪೂಜೆ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಾನಯೋಗಿ ಪಂ. ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಿರುವ ಶ್ರೀ ಗಣೇಶ ಮೂರ್ತಿಗೆ ಶಾಸಕ ಎಚ್.ಕೆ. ಪಾಟೀಲ ಅವರು ಭಾನುವಾರ ವಿಶೇಷ ಪೂಜೆ ಸಲ್ಲಿಸಿ, ಮಹಾಮಂಗಳಾರತಿ ನೆರವೇರಿಸಿದರು. ಈ ಸಂದರ್ಭದಲ್ಲಿ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಎಚ್.ಕೆ. ಪಾಟೀಲ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ ಅವರನ್ನೂ ಸನ್ಮಾನಿಸಲಾಯಿತು. ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲೀಮನಿ, ಸಹಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜಿ. ಗಾಣಿಗೇರ ಸೇರಿದಂತೆ ಪದಾಧಿಕಾರಿಗಳು, ಎಪಿಎಂಸಿ ವರ್ತಕರು ಹಾಗೂ ಗಣ್ಯರು ಉಪಸ್ಥಿತರಿದ್ದರು.

### 16ನೇ ಪುಣ್ಯಸ್ಮರಣೋತ್ಸವಕ್ಕೆ ಅವಳಿ ನಗರ ಸಾಕ್ಷಿ | ವಿವಿಧೆಡೆ ಅನ್ನದಾಸೋಹ, ಸ್ವರ ನಮನ

# ಮುದ್ರಣಕಾಶಿಯಲ್ಲಿ ಮೊಳಗಿದ ಪುಟ್ಟರಾಜರ ಸ್ವರಸ್ಮರಣೆ

**ವಿಜಯಸಾಕ್ಷಿ ಸುದ್ದಿ, ಗದಗ**



ಅಂಧರ ಬಾಳಿಗೆ ಬೆಳಕಾಗಿ, ಸಂಗೀತ ಲೋಕದಲ್ಲಿ ಅಚ್ಚಳಿಯದ ಛಾಪು ಮೂಡಿಸಿ, ಪರೋಪಕಾರ ಹಾಗೂ ಸಮಾಜಸೇವೆಯ ಮೂಲಕ ಜನಮಾನಸದಲ್ಲಿ ಶಾಶ್ವತ ಸ್ಥಾನ ಪಡೆದ ಗಾನಯೋಗಿ ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳ 16ನೇ ಪುಣ್ಯಸ್ಮರಣೋತ್ಸವವು ಸೋಮವಾರ ಗದಗ-ಬೆಟಗೇರಿ ಅವಳಿ ನಗರದಲ್ಲಿ ಭಕ್ತಿ, ಸಂಗೀತ ಹಾಗೂ ಅನ್ನದಾಸೋಹದ ಸಂಭ್ರಮದೊಂದಿಗೆ ನಡೆಯಿತು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಗಾನಯೋಗಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ವತಿಯಿಂದ ಪುಣ್ಯಸ್ಮರಣೋತ್ಸವ, ಶಿವಯೋಗಿ ಶ್ರೀ ಪುಟ್ಟರಾಜ ಪ್ರಶಸ್ತಿ ಪ್ರದಾನ ಹಾಗೂ ಸ್ವರ ನಮನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಬೆಳಗ್ಗೆಯಿಂದಲೇ ಪುಣ್ಯಾಶ್ರಮಕ್ಕೆ ನಾಡಿನ ವಿವಿಧೆಡೆಯಿಂದ ಭಕ್ತರು ಆಗಮಿಸಿ ಪುಟ್ಟರಾಜ ಗವಾಯಿಗಳ ಕರ್ತೃ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಿ ದರ್ಶನ ಪಡೆದರು.

ಕಾರ್ಯಕ್ರಮಕ್ಕೆ ದಿವ್ಯ ಸಾನ್ನಿಧ್ಯ ವಹಿಸಿದ್ದ ಗದುಗಿನ ತೋಂಟದಾರ್ಯ ಶ್ರೀಮಠದ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮಾತನಾಡಿ, ಪುಟ್ಟರಾಜ ಗವಾಯಿಗಳು ತಮ್ಮ ಇಡೀ ಬದುಕನ್ನು ಪರೋಪಕಾರ ಹಾಗೂ ಸಮಾಜಸೇವೆಗೆ ಮೀಸಲಿಟ್ಟಿದ್ದರು. ಶಿವನೊಂದಿಗೆ ಅನುಸಂಧಾನ ಮಾಡಿಕೊಂಡು ಅವರು ಶಿವಯೋಗಿಗಳಾದರು. ಅಂಧರಾಗಿದ್ದರೂ ಅಂತರಾಳದ ಕಣ್ಣುಗಳಿಂದ ಲೋಕವನ್ನು ಕಂಡ ಅವರು, ಕಣ್ಣುಗಳಿದ್ದವರು ಮಾಡದ ಸಾಧನೆ ಮಾಡಿದ್ದಾರೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ವಾಸಣ್ಣ ಕುರುಡಗಿ ಮಾತನಾಡಿ, ಸಾವಿರಾರು ಅಂಧ ಹಾಗೂ ಅನಾಥ ಮಕ್ಕಳಿಗೆ ಬದುಕು ಕಟ್ಟಿಕೊಟ್ಟ ವೀರೇಶ್ವರ ಪುಣ್ಯಾಶ್ರಮವು ಸೇವೆಯ ಮಾದರಿಯಾಗಿದೆ. ಪುಟ್ಟರಾಜ ಗವಾಯಿಗಳ ಸೇವಾ ಪರಂಪರೆ ಇಂದಿಗೂ ಮುಂದುವರಿದಿದೆ ಎಂದರು.

ಬಿ. ಶ್ರೀರಾಮುಲು ಅವರ ಆಪ್ತ ಸಹಾಯಕ ಎಸ್.ಎಚ್. ಶಿವನಗೌಡ್ರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಹಾಗೂ ಕರ್ನಾಟಕ ರಾಜ್ಯ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿ ಪುಟ್ಟರಾಜ ಗವಾಯಿಗಳ ಸೇವೆ ಮತ್ತು ಸಾಧನೆಯನ್ನು ಸ್ಮರಿಸಿದರು. ಗಾನಯೋಗಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಅಧ್ಯಕ್ಷ ಶಿವಲಿಂಗಯ್ಯಸ್ವಾಮಿ ಹಿರೇಮಠ ಸಿದ್ದಾಪುರ ಅಧ್ಯಕ್ಷತೆ ವಹಿಸಿದ್ದರು.

ಲಿಂ. ರಾಜಶೇಖರಯ್ಯ ಹಾಗೂ ಲಿಂ. ನೀಲಾಂಬಿಕಾ ನವಲಿಹಿರೇಮಠ ಕೊಪ್ಪಳ ಅವರ ಸ್ಮರಣಾರ್ಥ ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮುಧೋಳದ ಪಂ. ದೇವೇಂದ್ರಕುಮಾರ ಪತ್ತಾರ, ಬಿ. ಶ್ರೀರಾಮುಲು ಅವರ ಮಾತೋಶ್ರೀ ದಿ. ಶ್ರೀಮತಿ ಹೊನ್ನೂರಮ್ಮ ಅವರ ಸ್ಮರಣಾರ್ಥ ವಾದ್ಯ ಕ್ಷೇತ್ರದ ಗದುಗಿನ ಪಂ. ಶರಣಕುಮಾರ ಗುತ್ತರಗಿ ಹಾಗೂ ಜ್ಯೋತಿಷ್ಯವಾಗ್ಮಿ ಪಂ. ಲಿಂ. ಚನ್ನವೀರಶಾಸ್ತ್ರಿ ಹಿಡ್ಕಿಮಠ ಅವರ ಸ್ಮರಣಾರ್ಥ ರಂಗಭೂಮಿ ಕ್ಷೇತ್ರದ ಬಡ್ನಿಯ ರಾಚಯ್ಯ ಹಿರೇಮಠ ಅವರಿಗೆ ಶಿವಯೋಗಿ ಶ್ರೀ ಪುಟ್ಟರಾಜ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಸನ್ಮಾನಿತರ ಪರವಾಗಿ ಪಂ. ದೇವೇಂದ್ರಕುಮಾರ ಪತ್ತಾರ ಮಾತನಾಡಿದರು.

**ಅವಳಿ ನಗರದಲ್ಲಿ ಎಲ್ಲೆಲ್ಲೂ ಪುಟ್ಟರಾಜರ ಸ್ಮರಣೆ**

ಪುಣ್ಯಾರಾಧನೆ ಅಂಗವಾಗಿ ಬೆಳಿಗ್ಗೆ ವೀರೇಶ್ವರ ಪುಣ್ಯಾಶ್ರಮದಿಂದ ಪುಟ್ಟರಾಜ ಗವಾಯಿಗಳ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಿತು. ಕುಂಭ, ಕಳಸ ಹಾಗೂ ವಿವಿಧ ಕಲಾತಂಡಗಳು ಮೆರವಣಿಗೆಗೆ ಮೆರುಗು ನೀಡಿದವು.

ಅವಳಿ ನಗರದ ಪ್ರಮುಖ ವೃತ್ತಗಳು, ಬೀದಿಗಳು ಹಾಗೂ ವಿವಿಧ ಬಡಾವಣೆಗಳಲ್ಲಿ ಪುಟ್ಟರಾಜರ ಭಾವಚಿತ್ರ ಪ್ರತಿಷ್ಠಾಪಿಸಿ ಪೂಜೆ, ಸಂಗೀತ ಕಾರ್ಯಕ್ರಮ ಹಾಗೂ ಅನ್ನಸಂತರ್ಪಣೆ ಆಯೋಜಿಸಲಾಗಿತ್ತು.

ತೋಂಟದಾರ್ಯ ಆಟೋ ನಿಲ್ದಾಣ, ಗಾಂಧಿ ವೃತ್ತ, ರೈಲ್ವೆ ನಿಲ್ದಾಣ, ಹಳೆಯ ಬಸ್ ನಿಲ್ದಾಣ, ಸ್ಟೇಷನ್ ರಸ್ತೆ, ಕಾಟನ್ ಮಾರುಕಟ್ಟೆ ರಸ್ತೆ, ಮುಳಗುಂದ ನಾಕಾ, ಹಾತಲಗೇರಿ ನಾಕಾ, ಶಹಾಪುರ ಪೇಟೆ, ಬೆಟಗೇರಿಯ ತೆಂಗಿನಕಾಯಿ ಬಜಾರ್ ಸೇರಿದಂತೆ ವಿವಿಧೆಡೆ ಮಹಾ ಅನ್ನಸಂತರ್ಪಣೆ ನಡೆಯಿತು.

ವೀರೇಶ್ವರ ಪುಣ್ಯಾಶ್ರಮದ ಅಂಧರ ಸಂಗೀತ ಶಾಲೆಯ ವಿದ್ಯಾರ್ಥಿಗಳು ಹಾಗೂ ಶಿಷ್ಯರು ಪುಟ್ಟರಾಜ ಗವಾಯಿಗಳ ಭಕ್ತಿ ಗೀತೆಗಳನ್ನು ಹಾಡಿ ಸ್ವರ ನಮನ ಸಲ್ಲಿಸಿದರು. ಬಳಿಕ ಅಹೋರಾತ್ರಿ ಸ್ವರ-ನಮನ ಕಾರ್ಯಕ್ರಮ ನಡೆಯಿತು.

ಸಮಾಜಸೇವಕ ರವಿಕಾಂತ ಅಂಗಡಿ, ಸದಾಶಿವ ಯ್ಯಸ್ವಾಮಿ ಮದರಿಮಠ, ವಸಂತ ಪಡಗದ, ಪಂಚಾಕ್ಷರಿ ಹಿಡ್ಕಿಮಠ, ದತ್ತಾ ಡೆವಲಪರ್ಸ್ ನಿರ್ದೇಶಕ ಕಿರಣ ಭೂಮಾ, ಚನ್ನಯ್ಯಸ್ವಾಮಿ ಹಿರೇಮಠ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

> **ಪುಟ್ಟರಾಜರ ಸೇವೆಯೇ ಸ್ಫೂರ್ತಿ**
>
> ಪುಟ್ಟರಾಜ ಗವಾಯಿಗಳ ಹೆಸರಿನಲ್ಲಿ ಸೇವಾ ಸಮಿತಿ ನಿರಂತರವಾಗಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಅವರ ಮಾರ್ಗದರ್ಶನದಲ್ಲಿ ಬೆಳೆದು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ. ಸಂಗೀತ, ಶಿಕ್ಷಣ, ಸೇವೆ ಹಾಗೂ ಅನ್ನದಾಸೋಹದ ಮೂಲಕ ಪುಟ್ಟರಾಜ ಗವಾಯಿಗಳ ಸೇವಾ ಪರಂಪರೆ ಮುಂದುವರಿಯುತ್ತಿದೆ.

### ತಪ್ಪು ಅಂಕಿಅಂಶಗಳಿಂದ ಬರ ತಪ್ಪಿದೆಯೇ? - ಅನಿಲ ಮೆಣಸಿನಕಾಯಿ ಪ್ರಶ್ನೆ

# ಮಳೆಮಾಪನವೇ ಸರಿಯಿಲ್ಲದಿದ್ದರೆ ಬರ ನಿರ್ಧಾರ ಹೇಗೆ?

**ವಿಜಯಸಾಕ್ಷಿ ಸುದ್ದಿ, ಗದಗ**



ಜಿಲ್ಲೆಯಲ್ಲಿ ವಾಸ್ತವ ಮಳೆ ಪ್ರಮಾಣ ದಾಖಲಿಸಬೇಕಾದ ಮಳೆಮಾಪನ ಯಂತ್ರಗಳೇ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲವೆಂದಾದರೆ, ಬರ ಘೋಷಣೆಗೆ ಯಾವ ಅಂಕಿಅಂಶಗಳನ್ನು ಆಧಾರವಾಗಿಸಲಾಗಿದೆ ಎಂಬ ಪ್ರಶ್ನೆ ಎದುರಾಗಿದೆ. ಜಿಲ್ಲೆಯಲ್ಲಿ ಶೇ.90ರಷ್ಟು ಮಳೆಮಾಪನ ಯಂತ್ರಗಳು ಕಾರ್ಯನಿರ್ವಹಿಸುತ್ತಿಲ್ಲ ಎಂದು ಆರೋಪಿಸಿರುವ ಗದಗ ವಿಧಾನಸಭಾ ಕ್ಷೇತ್ರದ ಬಿಜೆಪಿ ಪರಾಜಿತ ಅಭ್ಯರ್ಥಿ ಅನಿಲ ಮೆಣಸಿನಕಾಯಿ, ತಪ್ಪಾದ ಅಥವಾ ಅಪೂರ್ಣ ಮಳೆ ದಾಖಲೆಗಳಿಂದ ಗದಗ ಜಿಲ್ಲೆ ಬರ ಘೋಷಣೆಯಿಂದ ಹೊರಗುಳಿದಿದೆಯೇ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯಲ್ಲಿ ಎಷ್ಟು ಮಳೆಯಾಗಿದೆ, ಎಷ್ಟು ಮಳೆ ಕೊರತೆಯಾಗಿದೆ ಹಾಗೂ ಯಾವ ಪ್ರದೇಶಗಳು ಬರದಿಂದ ತೀವ್ರವಾಗಿ ಬಾಧಿತವಾಗಿವೆ ಎಂಬುದನ್ನು ನಿರ್ಧರಿಸಲು ಮಳೆಮಾಪನ ಕೇಂದ್ರಗಳ ದಾಖಲೆಗಳು ಪ್ರಮುಖವಾಗಿವೆ. ಆದರೆ ಗದಗ ಕ್ಷೇತ್ರ ಸೇರಿದಂತೆ ಜಿಲ್ಲೆಯಲ್ಲಿ ಹಲವು ಮಳೆಮಾಪನ ಕೇಂದ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ತಿಳಿಸಿದ್ದಾರೆ.

ಮಳೆಮಾಪನ ಯಂತ್ರಗಳು ಕಾರ್ಯನಿರ್ವಹಿಸದಿದ್ದರೆ ಮಳೆ ಪ್ರಮಾಣದ ದಾಖಲೆಗಳಲ್ಲಿ ವ್ಯತ್ಯಾಸ ಉಂಟಾಗುವ ಸಾಧ್ಯತೆಯಿದೆ. ಇದರಿಂದ ವಾಸ್ತವದಲ್ಲಿ ಬೆಳೆಗಳು ಒಣಗಿದ್ದರೂ, ಜಲಮೂಲಗಳು ಬತ್ತಿದ್ದರೂ ಹಾಗೂ ರೈತರು ಆರ್ಥಿಕ ಸಂಕಷ್ಟದಲ್ಲಿದ್ದರೂ, ಅಧಿಕೃತ ಅಂಕಿಅಂಶಗಳಲ್ಲಿ ಬರದ ತೀವ್ರತೆ ಸಮರ್ಪಕವಾಗಿ ದಾಖಲಾಗದೇ ಹೋಗಬಹುದು ಎಂದು ಅವರು ಹೇಳಿದ್ದಾರೆ.

> ಮಳೆಮಾಪನ ಯಂತ್ರಗಳೇ ಸಮರ್ಪಕವಾಗಿ ಕಾರ್ಯನಿರ್ವಹಿಸದಿದ್ದರೆ, ಅವುಗಳ ಅಂಕಿಅಂಶಗಳ ಆಧಾರದಲ್ಲಿ ಬರ ಪರಿಸ್ಥಿತಿ ನಿರ್ಧರಿಸುವುದು ಹೇಗೆ? ಯಂತ್ರಗಳ ನಿರ್ವಹಣಾ ವೈಫಲ್ಯಕ್ಕೆ ರೈತರನ್ನು ಹೊಣೆ ಮಾಡುವುದು ಯಾವ ನ್ಯಾಯ? ಸರ್ಕಾರ ಮತ್ತು ಜಿಲ್ಲಾಡಳಿತ ಮಳೆಮಾಪನ ವ್ಯವಸ್ಥೆಯ ಸಂಪೂರ್ಣ ವರದಿಯನ್ನು ಬಹಿರಂಗಪಡಿಸಿ, ಗದಗದ ಬರ ಪರಿಸ್ಥಿತಿಯನ್ನು ಮರುಪರಿಶೀಲಿಸಬೇಕು.
>
> – ಅನಿಲ ಮೆಣಸಿನಕಾಯಿ, ಬಿಜೆಪಿ ಪರಾಜಿತ ಅಭ್ಯರ್ಥಿ

**ಸರ್ಕಾರಕ್ಕೆ ಹಲವು ಪ್ರಶ್ನೆ**

ಜಿಲ್ಲೆಯಲ್ಲಿ ಒಟ್ಟು ಎಷ್ಟು ಮಳೆಮಾಪನ ಯಂತ್ರಗಳಿವೆ, ಅವುಗಳಲ್ಲಿ ಎಷ್ಟು ಕಾರ್ಯನಿರ್ವಹಿಸುತ್ತಿವೆ, ಕಾರ್ಯನಿರ್ವಹಿಸದ ಯಂತ್ರಗಳ ಕೊನೆಯ ತಾಂತ್ರಿಕ ಪರಿಶೀಲನೆ ಯಾವಾಗ ನಡೆದಿದೆ, ದೋಷಪೂರಿತ ಯಂತ್ರಗಳ ಮಾಹಿತಿ ಸರ್ಕಾರಕ್ಕೆ ನೀಡಲಾಗಿತ್ತೇ ಹಾಗೂ ಬರ ಘೋಷಣೆಗೆ ಯಾವ ಮಳೆ ಅಂಕಿಅಂಶಗಳನ್ನು ಆಧಾರವಾಗಿಸಲಾಗಿದೆ ಎಂಬುದನ್ನು ಸರ್ಕಾರ ಮತ್ತು ಜಿಲ್ಲಾಡಳಿತ ಸ್ಪಷ್ಟಪಡಿಸಬೇಕು ಎಂದು ಅನಿಲ ಮೆಣಸಿನಕಾಯಿ ಒತ್ತಾಯಿಸಿದ್ದಾರೆ.

ಯಂತ್ರಗಳು ಕಾರ್ಯನಿರ್ವಹಿಸದ ದಿನಗಳ ಮಳೆ ಪ್ರಮಾಣವನ್ನು ಹೇಗೆ ಲೆಕ್ಕಹಾಕಲಾಗಿದೆ ಎಂಬುದನ್ನೂ ಬಹಿರಂಗಪಡಿಸಬೇಕು.

ತಾಲೂಕು ವಾರು, ಹೋಬಳಿವಾರು ಹಾಗೂ ಗ್ರಾಮವಾರು ಮಳೆಮಾಪನ ಯಂತ್ರಗಳ ಸ್ಥಿತಿಗತಿ, ಕಾರ್ಯನಿರ್ವಹಣಾ ದಾಖಲೆ, ತಾಂತ್ರಿಕ ಪರಿಶೀಲನೆಯ ದಿನಾಂಕ ಹಾಗೂ ದಾಖಲಾದ ಮಳೆಯ ವಿವರಗಳನ್ನು ಸಾರ್ವಜನಿಕವಾಗಿ ಪ್ರಕಟಿಸಬೇಕು ಎಂದು ಆಗ್ರಹಿಸಿದ್ದಾರೆ.

**ಹೊಲದ ವಾಸ್ತವ ಸ್ಥಿತಿಯೂ ಪರಿಗಣಿಸಿ**

ಬರ ಪರಿಸ್ಥಿತಿ ನಿರ್ಧರಿಸುವಾಗ ಕೇವಲ ದೋಷಪೂರಿತ ಯಂತ್ರಗಳ ಅಂಕಿಅಂಶಗಳನ್ನೇ ಅವಲಂಬಿಸದೆ, ಉಪಗ್ರಹ ಮಾಹಿತಿ, ಜಲಾಶಯ ಹಾಗೂ ಅಂತರ್ಜಲದ ಸ್ಥಿತಿ, ಬಿತ್ತನೆ ಪ್ರಮಾಣ, ಬೆಳೆ ಒಣಗಿರುವ ಪ್ರಮಾಣ, ಮಣ್ಣಿನ ತೇವಾಂಶ ಮತ್ತು ಗ್ರಾಮಮಟ್ಟದ ಜಂಟಿ ಸಮೀಕ್ಷೆಯನ್ನೂ ಪರಿಗಣಿಸಬೇಕು ಎಂದು ಅವರು ಹೇಳಿದ್ದಾರೆ.

ರೈತರ ಹೊಲಗಳ ವಾಸ್ತವ ಪರಿಸ್ಥಿತಿ ಹಾಗೂ ಬೆಳೆನಷ್ಟದ ಸ್ಥಳ ಪರಿಶೀಲನೆ ನಡೆಸಿ, ಅಗತ್ಯವಿರುವ ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ತಾಂತ್ರಿಕ ದೋಷ ಅಥವಾ ಅಧಿಕಾರಿಗಳ ನಿರ್ಲಕ್ಷ್ಯದಿಂದ ರೈತರಿಗೆ ಬರ ಪರಿಹಾರ, ಬೆಳೆನಷ್ಟ ಪರಿಹಾರ, ವಿಮಾ ಸೌಲಭ್ಯ ಹಾಗೂ ಇತರ ಸರ್ಕಾರಿ ನೆರವು ಕೈತಪ್ಪಿದರೆ ಅದು ರೈತರಿಗೆ ಗಂಭೀರ ಅನ್ಯಾಯವಾಗಲಿದೆ ಎಂದು ತಿಳಿಸಿದ್ದಾರೆ.

# ಕ್ರೀಡೆಯಿಂದ ದೈಹಿಕ-ಮಾನಸಿಕ ಉಲ್ಲಾಸ

**ವಿಜಯಸಾಕ್ಷಿ ಸುದ್ದಿ, ಗದಗ**



ಕ್ರೀಡೆ ಕೇವಲ ಗೆಲುವು-ಸೋಲಿಗೆ ಸೀಮಿತವಲ್ಲ. ವಿದ್ಯಾರ್ಥಿಗಳಲ್ಲಿ ಶಿಸ್ತು, ಸಹನೆ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸುವ ಜೊತೆಗೆ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಸಹಕಾರಿಯಾಗಿದೆ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 2026-27ನೇ ಸಾಲಿನ ತಾಲ್ಲೂಕು ಮಟ್ಟದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಕ್ರೀಡಾಕೂಟಕ್ಕೆ ಧ್ವಜಾರೋಹಣ ನೆರವೇರಿಸಿ ಚಾಲನೆ ನೀಡಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಪಠ್ಯದ ಜತೆಗೆ ಕ್ರೀಡೆಯಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಕ್ರೀಡಾಪಟುಗಳಿಗೆ ಎಲ್ಲರೂ ಪ್ರೋತ್ಸಾಹ ನೀಡಬೇಕು. ಮುಂದಿನ ವರ್ಷದೊಳಗೆ ಕೆ.ಎಚ್. ಪಾಟೀಲ ಕ್ರೀಡಾಂಗಣ ಹಸಿರು ಹುಲ್ಲಿನ ಫುಟ್ಬಾಲ್ ಮೈದಾನವಾಗಿ ರೂಪುಗೊಂಡು ರಾಷ್ಟ್ರಮಟ್ಟದ ಪಂದ್ಯಗಳಿಗೆ ವೇದಿಕೆಯಾಗಲಿದೆ. 6 ಲೈನ್ ಟ್ರ್ಯಾಕ್ 8 ಲೈನ್ ಟ್ರ್ಯಾಕ್ ಆಗಿ ಅಭಿವೃದ್ಧಿಯಾಗಲಿದ್ದು, ಕ್ರೀಡಾಪಟುಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಕರ್ನಾಟಕ ಸರ್ಕಾರ, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮತ್ತು ಕ್ಷೇತ್ರ ಸಂಪನ್ಮೂಲ ಕೇಂದ್ರ ಗ್ರಾಮೀಣ ವಲಯದ ಸಂಯುಕ್ತ ಆಶ್ರಯದಲ್ಲಿ ಕ್ರೀಡಾಕೂಟ ಆಯೋಜಿಸಲಾಗಿತ್ತು. ಕ್ರೀಡಾ ಜ್ಯೋತಿ ಸ್ವೀಕರಿಸಿ ಮಾತನಾಡಿದ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಗದಗ ಜಿಲ್ಲಾ ಅಧ್ಯಕ್ಷ ಬಸವರಾಜ ಬಳ್ಳಾರಿ, ಶಾಲಾ ಹಂತದಿಂದಲೇ ಕ್ರೀಡಾಸಕ್ತಿ ಬೆಳೆಸಿಕೊಂಡರೆ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಲು ಸಾಧ್ಯ. ಗ್ರಾಮೀಣ ಭಾಗದ ಪ್ರತಿಭೆಗಳಿಗೆ ಇಂತಹ ಕ್ರೀಡಾಕೂಟಗಳು ಉತ್ತಮ ವೇದಿಕೆಯಾಗಿವೆ. ವಿದ್ಯಾರ್ಥಿಗಳು ಕ್ರೀಡಾಸ್ಫೂರ್ತಿಯಿಂದ ಭಾಗವಹಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡವಿನಮನಿ ಮಾತನಾಡಿದರು. ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕಿ ಪಿ.ಕೆ. ಅವರಡ್ಡಿ ಸ್ವಾಗತಿಸಿದರು. ಶಾರದಾ ಬಂಡಿ ವಂದನೆ ಸಲ್ಲಿಸಿದರು. ಮಹಾಂತೇಶ ಪೂಜಾರ ಕಾರ್ಯಕ್ರಮ ನಿರೂಪಿಸಿದರು. ಜೆ.ವಿ. ಬಾವಿಕಟ್ಟಿ, ಗಾಯತ್ರಿದೇವಿ, ಬಿ.ಎಫ್. ಪೂಜಾರ, ವಿ.ಎಂ. ಹಿರೇಮಠ, ರಾಜು ಚವ್ಹಾಣ, ವಸಂತ ಕಲಕಂಬ, ಎಸ್.ಆರ್. ಬಂಡಿ, ರವಿರಾಜ ಪವಾರ, ಎಸ್.ಬಿ. ಆಲೂರ, ಡಿ.ಎಸ್. ತಳವಾರ, ಚಂದ್ರು ಮೇಲಿನಮನಿ, ಎಫ್.ಎಂ. ಮುಶಣ್ಣವರ, ಎನ್.ಎಚ್. ಪಾಟೀಲ, ಸುರೇಶ ಕೊಪ್ಪದ, ಅಜ್ಜಪ್ಪ ಹುಗ್ಗಣ್ಣವರ ಸೇರಿದಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳು, ದೈಹಿಕ ಶಿಕ್ಷಕರು, ಶಿಕ್ಷಕರು ಹಾಗೂ ನೂರಾರು ಕ್ರೀಡಾಪಟುಗಳು ಪಾಲ್ಗೊಂಡಿದ್ದರು.

### ವಿಳಂಬವಿಲ್ಲದೆ ಯೋಜನೆ ತಲುಪಿಸಲು ಬಿ.ಬಿ. ಅಸೂಟಿ ಸೂಚನೆ

# ಅರ್ಹರಿಗೆ ಗ್ಯಾರಂಟಿ ಸೌಲಭ್ಯ ತಪ್ಪದಿರಲಿ

**ವಿಜಯಸಾಕ್ಷಿ ಸುದ್ದಿ, ಗದಗ**




ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯದಿಂದ ಯಾವುದೇ ಅರ್ಹ ಫಲಾನುಭವಿಯೂ ವಂಚಿತರಾಗದಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಅರ್ಹರಿಗೆ ಸರ್ಕಾರದ ಸೌಲಭ್ಯಗಳು ನಿಗದಿತ ಸಮಯದಲ್ಲೇ ತಲುಪುವಂತೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಸೂಚಿಸಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬಡಜನರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ಉದ್ದೇಶದಿಂದ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಮಹಿಳೆಯರು ಸ್ವಾವಲಂಬಿಗಳಾಗಲು ಗೃಹಲಕ್ಷ್ಮಿ ಯೋಜನೆ ಸಹಕಾರಿಯಾಗಿದ್ದು, ಅರ್ಹ ಫಲಾನುಭವಿಗಳಿಗೆ ಯಾವುದೇ ವಿಳಂಬವಿಲ್ಲದೆ ಸೌಲಭ್ಯ ತಲುಪಿಸಬೇಕು ಎಂದರು.

ಗದಗ ನಗರದ ಹಳೇ ಹಾಗೂ ಹೊಸ ಬಸ್ ನಿಲ್ದಾಣಗಳ ಸ್ವಚ್ಛತೆ, ಅಂಗವಿಕಲರಿಗೆ ಪ್ರತ್ಯೇಕ ಶೌಚಾಲಯ ಮತ್ತು ಮಹಿಳೆಯರ ವಿಶ್ರಾಂತಿ ಕೊಠಡಿಯ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಜಿಲ್ಲೆಯ ಎಲ್ಲ ಬಸ್ ನಿಲ್ದಾಣಗಳಲ್ಲಿ ಮೂಲಸೌಕರ್ಯ ಕಲ್ಪಿಸಿ ಸ್ವಚ್ಛತೆ ಕಾಪಾಡಬೇಕು ಎಂದು ಸೂಚಿಸಿದರು.

ಗ್ಯಾರಂಟಿ ಯೋಜನಾ ಅನುಷ್ಠಾನ ಪ್ರಾಧಿಕಾರದ ಸದಸ್ಯ ಅಶೋಕ ಮಂದಾಲಿ ಮಾತನಾಡಿ, ಐತಿಹಾಸಿಕ ಲಕ್ಕುಂಡಿಗೆ ಪ್ರವಾಸೋದ್ಯಮ ಉತ್ತೇಜನಕ್ಕಾಗಿ ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಬೇಕು.

ಗ್ಯಾರಂಟಿ ಯೋಜನೆಗಳ ಸೌಲಭ್ಯ ತಲುಪಿಸುವಲ್ಲಿ ಅನಗತ್ಯ ವಿಳಂಬವಾಗಬಾರದು ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್ ಮಾತನಾಡಿ, ಸಂಬಂಧಿತ ಅಧಿಕಾರಿಗಳು ಯೋಜನೆಗಳ ಅನುಷ್ಠಾನವನ್ನು ನಿರಂತರವಾಗಿ ಪರಿಶೀಲಿಸಿ, ಅರ್ಹರಿಗೆ ನಿಗದಿತ ಅವಧಿಯಲ್ಲಿ ಸೌಲಭ್ಯ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದರು.

ಸಭೆಯಲ್ಲಿ ಹೊಳೆಆಲೂರು ಬಸ್ ನಿಲ್ದಾಣಕ್ಕೆ ಕರ್ನಾಟಕ ಏಕೀಕರಣದ ರೂವಾರಿ ಆಲೂರು ವೆಂಕಟರಾಯರ ಹೆಸರಿಡುವ ಕುರಿತು ಹಾಗೂ ರಾಮಗಿರಿ ಮತ್ತು ಮಾಗಡಿ ಪಂಚಾಯಿತಿಗಳಲ್ಲಿ ವಿದ್ಯುತ್ ಕಂಬಗಳ ವ್ಯವಸ್ಥೆ ಕಲ್ಪಿಸುವ ಕುರಿತು ಚರ್ಚಿಸಲಾಯಿತು.

> ಪಂಚ ಗ್ಯಾರಂಟಿ ಯೋಜನೆಗಳ ಸೌಲಭ್ಯದಿಂದ ಯಾವುದೇ ಅರ್ಹ ಫಲಾನುಭವಿಯೂ ವಂಚಿತರಾಗಬಾರದು. ನಿಗದಿತ ಸಮಯದಲ್ಲೇ ಸೌಲಭ್ಯ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು.
>
> – ಬಿ.ಬಿ. ಅಸೂಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ

**ಗ್ಯಾರಂಟಿ ಯೋಜನೆಗಳ ಪ್ರಗತಿ**

ಗೃಹಲಕ್ಷ್ಮಿ ಯೋಜನೆಯಡಿ ಜೂನ್ 2026ರ ಅಂತ್ಯದವರೆಗೆ 2,63,579 ಅರ್ಜಿಗಳು ನೋಂದಣಿಯಾಗಿದ್ದು, 2,42,804 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಶೇ.92.08ರಷ್ಟು ಪ್ರಗತಿ ಸಾಧಿಸಲಾಗಿದೆ.

ಶಕ್ತಿ ಯೋಜನೆಯಡಿ 2023ರ ಜೂನ್ 11ರಿಂದ 2026ರ ಸೆಪ್ಟೆಂಬರ್ 15ರವರೆಗೆ ಜಿಲ್ಲೆಯಲ್ಲಿ 1769.06 ಲಕ್ಷ ಪ್ರಯಾಣಿಕರು ಪ್ರಯಾಣಿಸಿದ್ದು, ಮಹಿಳಾ ಪ್ರಯಾಣಿಕರಿಂದ 60,728.67 ಲಕ್ಷ ರೂ. ಆದಾಯ ದಾಖಲಾಗಿದೆ.

ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ 2,57,656 ಪಡಿತರ ಚೀಟಿದಾರರಿದ್ದು, ಸೆ.15ರವರೆಗೆ 35,900 ಕ್ವಿಂಟಲ್ ಅಕ್ಕಿ ವಿತರಿಸಲಾಗಿದೆ.

ಯುವನಿಧಿ ಯೋಜನೆಯಡಿ 9,568 ಅರ್ಜಿಗಳು ಸ್ವೀಕೃತವಾಗಿದ್ದು, 8,282 ಅರ್ಹ ಫಲಾನುಭವಿಗಳಿಗೆ 25.74 ಕೋಟಿ ರೂ. ಡಿಬಿಟಿ ಮೂಲಕ ವರ್ಗಾವಣೆಯಾಗಿದೆ.

ಗೃಹಜ್ಯೋತಿ ಯೋಜನೆಯಡಿ 2026ರ ಆಗಸ್ಟ್ ಅಂತ್ಯದವರೆಗೆ 2,75,318 ಸ್ಥಾವರಗಳು ನೋಂದಣಿಯಾಗಿದ್ದು, ಶೇ.98.51ರಷ್ಟು ಪ್ರಗತಿ ಸಾಧಿಸಲಾಗಿದೆ. ಸೆ.30ರೊಳಗೆ ಫಲಾನುಭವಿಗಳ ಸಮೀಕ್ಷೆ ಪೂರ್ಣಗೊಳಿಸಲು ಸೂಚಿಸಲಾಗಿದೆ.

ಈ ಸಂದರ್ಭದಲ್ಲಿ ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಅವರು ಭಾರತ ಜೋಡೋ ಯುವ ಸಂಘಗಳ ಸ್ಥಾಪನೆ ಕುರಿತು ಮಾಹಿತಿ ನೀಡಿದರು.

ಸಭೆಯಲ್ಲಿ ಸಮಿತಿ ಉಪಾಧ್ಯಕ್ಷೆ ನೀಲಮ್ಮ ಬೋಳನವರ, ಉಪಾಧ್ಯಕ್ಷರಾದ ಪಿ.ಬಿ. ಅಗಳವಾಡಿ, ದೀಪಕ ಲಮಾಣಿ, ಫಕ್ರುಸಾಬ ಚಿಕ್ಕಮಣ್ಣೂರ, ಸದಸ್ಯರಾದ ಶರೀಫ್ ಬಿಳೆಯಲಿ, ನಾಗರಾಜ ಮಡಿವಾಳರ, ವಿವೇಕ ಯಾವಗಲ್, ದೇವಪ್ಪ ಮೋರನಾಳ, ಹನಮರಡ್ಡಿ ಮಲ್ಲಪ್ಪ ಮೇಟಿ, ಈಶಣ್ಣ ಹುಣಸೀಕಟ್ಟಿ, ಗೀತಾ ಬೀರಣ್ಣವರ, ವೀರಯ್ಯ ಮಠಪತಿ, ಜಿ.ಪಂ. ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ ಸೇರಿದಂತೆ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

### ಗಂಟೆಗೂ ಹೆಚ್ಚು ವಿಳಂಬದ ಬಳಿಕ ಬಂದ ಅಂಬುಲೆನ್ಸ್‌ನಲ್ಲಿ ಧೂಳು, ಕಸ; ಸಾರ್ವಜನಿಕರ ಆಕ್ರೋಶ

# ತಡವಾಗಿ ಬಂದ 108; ಅಸಲಿ ಬಣ್ಣ ಬಯಲು!

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ತುರ್ತು ಸಂದರ್ಭದಲ್ಲಿ ಜೀವ ಉಳಿಸಬೇಕಾದ 'ಆರೋಗ್ಯ ಕವಚ-108' ಜಕ್ಕಲಿ ಗ್ರಾಮಕ್ಕೆ ತಡವಾಗಿ ಬಂದು, ಬಂದ ಬಳಿಕ ತನ್ನ ಅಸಲಿ ಅವ್ಯವಸ್ಥೆಯ ಬಣ್ಣವನ್ನೂ ಬಯಲು ಮಾಡಿಕೊಂಡಿದೆ ಎಂಬ ಆರೋಪ ಕೇಳಿ ಬಂದಿದೆ. ತುರ್ತು ಚಿಕಿತ್ಸೆಯ ಹಿನ್ನೆಲೆಯಲ್ಲಿ ಕರೆ ಮಾಡಿದ ಬಳಿಕ ಒಂದು ಗಂಟೆಗೂ ಹೆಚ್ಚು ಸಮಯದ ನಂತರ ಅಂಬುಲೆನ್ಸ್ ಆಗಮಿಸಿದ್ದು, ವಾಹನದೊಳಗೆ ಧೂಳು, ಕಸ ಹಾಗೂ ಕೊಳಕು ಕಂಡುಬಂದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಶನಿವಾರ ಮುಂಜಾನೆ ಜಕ್ಕಲಿ ಗ್ರಾಮದಲ್ಲಿ ತುರ್ತು ಚಿಕಿತ್ಸೆಯ ಅಗತ್ಯವಿದ್ದ ಹಿನ್ನೆಲೆಯಲ್ಲಿ 108 ಅಂಬುಲೆನ್ಸ್‌ಗೆ ಕರೆ ಮಾಡಲಾಗಿತ್ತು. ಆದರೆ ಸ್ಥಳೀಯರ ಪ್ರಕಾರ ಒಂದು ಗಂಟೆಗೂ ಹೆಚ್ಚು ಸಮಯದ ಬಳಿಕ ಅಂಬುಲೆನ್ಸ್ ಗ್ರಾಮಕ್ಕೆ ಬಂದಿದೆ. ತುರ್ತು ಸಂದರ್ಭದಲ್ಲಿ ಸೇವೆ ವಿಳಂಬವಾಗಿರುವುದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ.

ಇಷ್ಟಕ್ಕೆ ಮುಗಿಯದ ಸಮಸ್ಯೆ ಅಂಬುಲೆನ್ಸ್ ಗ್ರಾಮಕ್ಕೆ ಬಂದ ಬಳಿಕ ಮತ್ತಷ್ಟು ಬಯಲಾಗಿದೆ.






ವಾಹನದ ಒಳಭಾಗದಲ್ಲಿ ಧೂಳು, ಕಸ ಹಾಗೂ ಕೊಳಕು ಕಂಡುಬಂದಿದ್ದು, ನೆಲಹಾಸು ಹರಿದು ಹಾಳಾಗಿರುವುದು ಗೋಚರಿಸಿದೆ. ರೋಗಿಗಳನ್ನು ಸಾಗಿಸುವ ಸ್ಟ್ರೆಚರ್, ಆಸನ ಸೇರಿದಂತೆ ವಿವಿಧ ಭಾಗಗಳಲ್ಲೂ ಸ್ವಚ್ಛತೆ ಮತ್ತು ನಿರ್ವಹಣೆಯ ಕೊರತೆ ಕಂಡುಬಂದಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಅಂಬುಲೆನ್ಸ್‌ನ ಸ್ಥಿತಿ ಕಂಡು ಸಾರ್ವಜನಿಕರು ಸಿಬ್ಬಂದಿಯನ್ನು ಪ್ರಶ್ನಿಸಿದಾಗ, ಸಿಬ್ಬಂದಿಯೇ ಸ್ಥಳದಲ್ಲಿಯೇ ವಾಹನದ ಒಳಭಾಗವನ್ನು ಕಸ ಗುಡಿಸಿ, ಧೂಳು ಸ್ವಚ್ಛಗೊಳಿಸಿದರು ಎಂದು ಸ್ಥಳೀಯರು ಆರೋಪಿಸಿದ್ದಾರೆ. ತುರ್ತು ರೋಗಿಗಳನ್ನು ಸಾಗಿಸುವ ವಾಹನದಲ್ಲೇ ಈ ರೀತಿಯ ಸ್ಥಿತಿ ಕಂಡುಬಂದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಗ್ರಾಮೀಣ ಭಾಗದ ಜನರಿಗೆ ತುರ್ತು ಸಂದರ್ಭದಲ್ಲಿ 108 ಸೇವೆಯೇ ಪ್ರಮುಖ ಆಸರೆಯಾಗಿದೆ. ಹೀಗಾಗಿ ಅಂಬುಲೆನ್ಸ್‌ಗಳ ನಿಯಮಿತ ನಿರ್ವಹಣೆ, ಸ್ವಚ್ಛತೆ, ಅಗತ್ಯ ವೈದ್ಯಕೀಯ ಸೌಲಭ್ಯ ಹಾಗೂ ಸಿಬ್ಬಂದಿಯ ಕಾರ್ಯವ್ಯವಸ್ಥೆಯನ್ನು ಅಧಿಕಾರಿಗಳು ಸಮರ್ಪಕವಾಗಿ ಪರಿಶೀಲಿಸಬೇಕು ಎಂದು ಮುತ್ತಣ್ಣ ಕಡಗದ ಒತ್ತಾಯಿಸಿದ್ದಾರೆ.

ಸಿಬ್ಬಂದಿಗೆ ವೇತನ ಬಾಕಿ ಇದ್ದರೆ ಅದನ್ನೂ ಪರಿಶೀಲಿಸಿ, ಸಮಯಕ್ಕೆ ಸರಿಯಾಗಿ ಪಾವತಿಸುವ ವ್ಯವಸ್ಥೆ ಮಾಡಬೇಕು. ತುರ್ತು ಕರೆಗಳಿಗೆ ಅಂಬುಲೆನ್ಸ್ ತ್ವರಿತವಾಗಿ ಸ್ಪಂದಿಸುವಂತೆ ಕ್ರಮ ಕೈಗೊಳ್ಳಬೇಕು. ಸೇವೆಯಲ್ಲಿ ಲೋಪ ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳ ಹೊಣೆಗಾರಿಕೆ ನಿಗದಿಪಡಿಸಿ, ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಜಕ್ಕಲಿ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ 108 ಅಂಬುಲೆನ್ಸ್ ಸೇವೆ ಅತ್ಯಂತ ಅವಶ್ಯಕವಾಗಿರುವುದರಿಂದ, ರೋಣ ಕ್ಷೇತ್ರದ ಶಾಸಕರು ಹಾಗೂ ವಿಧಾನಸಭಾಧ್ಯಕ್ಷರು, ಸ್ಥಳೀಯ ಜನಪ್ರತಿನಿಧಿಗಳು ಮತ್ತು ಸಂಬಂಧಪಟ್ಟ ಆರೋಗ್ಯ ಇಲಾಖೆ ಅಧಿಕಾರಿಗಳು ತಕ್ಷಣ ಗಮನ ಹರಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಅಂಬುಲೆನ್ಸ್ ಸೇವೆಯ ವಿಳಂಬದ ಕುರಿತು ಪರಿಶೀಲನೆ ನಡೆಸುವುದರ ಜೊತೆಗೆ ವಾಹನದ ಸ್ವಚ್ಛತೆ, ತಾಂತ್ರಿಕ ಸ್ಥಿತಿ, ವೈದ್ಯಕೀಯ ಸೌಲಭ್ಯಗಳು ಹಾಗೂ ಸಿಬ್ಬಂದಿಯ ಕಾರ್ಯವ್ಯವಸ್ಥೆಯನ್ನೂ ಪರಿಶೀಲಿಸಬೇಕು. ತುರ್ತು ಸಂದರ್ಭದಲ್ಲಿ ಕರೆ ಮಾಡಿದ ಕೂಡಲೇ ಸೇವೆ ಲಭ್ಯವಾಗುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂಬುದು ಗ್ರಾಮಸ್ಥರ ಆಗ್ರಹವಾಗಿದೆ.

ತಡವಾಗಿ ಬರುವುದಷ್ಟೇ ಅಲ್ಲ, ಬಂದಾಗಲೂ ಅವ್ಯವಸ್ಥೆ ಬಯಲಾಗುತ್ತಿರುವ 108 ಸೇವೆ ಕುರಿತು ಅಧಿಕಾರಿಗಳು ಗಂಭೀರವಾಗಿ ಗಮನ ಹರಿಸಬೇಕು ಎಂಬುದು ಜಕ್ಕಲಿ ಗ್ರಾಮಸ್ಥರ ಒತ್ತಾಯವಾಗಿದೆ.

> 108 ಅಂಬುಲೆನ್ಸ್ ಜನರ ಜೀವ ಉಳಿಸಬೇಕಾದ ಆರೋಗ್ಯ ಕವಚ. ಆದರೆ ಜಕ್ಕಲಿಯಲ್ಲಿ ಸೇವೆ ವಿಳಂಬವಾಗಿರುವ ಆರೋಪದ ಜೊತೆಗೆ ವಾಹನದ ಸ್ಥಿತಿಯೂ ಪ್ರಶ್ನೆ ಮೂಡಿಸಿದೆ. ಅಂಬುಲೆನ್ಸ್ ಸಮಯಕ್ಕೆ ಸರಿಯಾಗಿ ಆಗಮಿಸುವುದರ ಜೊತೆಗೆ, ವಾಹನ ಸ್ವಚ್ಛ ಹಾಗೂ ಸುಸ್ಥಿತಿಯಲ್ಲಿರುವುದು ಅತ್ಯಂತ ಅಗತ್ಯ.
>
> – ಮುತ್ತಣ್ಣ ಕಡಗದ, ಮಾಜಿ ಅಧ್ಯಕ್ಷರು, ರೋಣ ಬಿಜೆಪಿ ಮಂಡಲ

# ಓಝೋನ್ ಪದರ ರಕ್ಷಣೆ ನಮ್ಮೆಲ್ಲರ ಹೊಣೆ



**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಮರಗಿಡಗಳ ಸಂಖ್ಯೆ ಕ್ಷೀಣಿಸುತ್ತಿರುವುದು ಹವಾಮಾನ ವೈಪರೀತ್ಯಕ್ಕೆ ಪ್ರಮುಖ ಕಾರಣವಾಗಿದ್ದು, ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಗಣಿತಶಾಸ್ತ್ರ ಪ್ರಾಧ್ಯಾಪಕ ಬಸವರಾಜ ಬಳಗಾನೂರಮಠ ಕರೆ ನೀಡಿದರು.

ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕ ಆಯೋಜಿಸಿದ್ದ ವಿಶ್ವ ಓಝೋನ್ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಪ್ರತಿಯೊಬ್ಬ ವಿದ್ಯಾರ್ಥಿ ಕನಿಷ್ಠ ಒಂದು ಗಿಡ ನೆಟ್ಟು ಮಗುವಿನಂತೆ ಪೋಷಿಸುವ ಜವಾಬ್ದಾರಿ ವಹಿಸಬೇಕು. ಮುಂದಿನ ಪೀಳಿಗೆಗೆ ಸ್ವಚ್ಛ ಪರಿಸರ ಹಾಗೂ ಶುದ್ಧ ಗಾಳಿ ಒದಗಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು. ಇದೇ ಸಂದರ್ಭದಲ್ಲಿ ಕಾಲೇಜಿಗೆ ಸಸಿಗಳನ್ನು ದಾನ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಅಪ್ಪಣ್ಣ ಎನ್. ಹಂಜೆ ಮಾತನಾಡಿ, ಓಝೋನ್ ಪದರ ಸೂರ್ಯನ ಹಾನಿಕಾರಕ ನೇರಳಾತೀತ ಕಿರಣಗಳಿಂದ ಜೀವಸಂಕುಲವನ್ನು ರಕ್ಷಿಸುವ ಪ್ರಕೃತಿಯ ರಕ್ಷಾಕವಚವಾಗಿದೆ. ಪರಿಸರ ಸ್ನೇಹಿ ಜೀವನಶೈಲಿ ಅಳವಡಿಸಿಕೊಂಡು ಹೆಚ್ಚು ಗಿಡಗಳನ್ನು ನೆಟ್ಟು ಪೋಷಿಸುವ ಮೂಲಕ ಓಝೋನ್ ಪದರ ರಕ್ಷಣೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದರು.

ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ವಿಜಯಕುಮಾರ ಎಸ್. ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್‌ಎಸ್‌ಎಸ್ ಸ್ವಯಂಸೇವಕರು ಕಾಲೇಜು ಆವರಣದಲ್ಲಿ ಸಸಿಗಳನ್ನು ನೆಟ್ಟು ಅವುಗಳ ಪೋಷಣೆಯ ಜವಾಬ್ದಾರಿ ವಹಿಸಿಕೊಂಡರು. ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಶಿವಯೋಗ ಮಂದಿರಕ್ಕೆ ಗ್ರಾಮೀಣ ಸೇವೆ

# ಬೆರಣಿಯಲ್ಲಿ ಭಕ್ತಿ; ಭಸ್ಮದಲ್ಲಿ ಪಾವಿತ್ರ್ಯ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹಳ್ಳಿಯ ಬದುಕಿನಲ್ಲಿ ಸಗಣಿ ಎಂದರೆ ಕೇವಲ ಕೃಷಿಯ ಭಾಗವಲ್ಲ, ಅದು ಗ್ರಾಮೀಣ ಸಂಸ್ಕೃತಿ, ನೈಸರ್ಗಿಕ ಬದುಕು ಹಾಗೂ ಧಾರ್ಮಿಕ ಪರಂಪರೆಯೊಂದಿಗೂ ಬೆಸೆದುಕೊಂಡಿದೆ. ಇಂತಹ ಅಪರೂಪದ ಪರಂಪರೆಯನ್ನು ಕೋಟುಮಚಗಿ ಗ್ರಾಮದಲ್ಲಿ ಇಂದಿಗೂ ಭಕ್ತಿಭಾವದಿಂದ ಉಳಿಸಿಕೊಂಡು ಬರಲಾಗುತ್ತಿದೆ.

ಸಮೀಪದ ಕೋಟುಮಚಗಿ ಗ್ರಾಮದ ಶ್ರೀ ಹಾನಗಲ್ಲ ಕುಮಾರೇಶ್ವರ ಸಾವಯವ ಕೃಷಿ ನಿವಾಸದಲ್ಲಿ, ಶಿವಯೋಗ ಮಂದಿರದ ವಾರ್ಷಿಕ ಧಾರ್ಮಿಕ ಕಾರ್ಯದ ಅಂಗವಾಗಿ ಶುಕ್ರವಾರ ಸಗಣಿ ಪೂಜೆ ನೆರವೇರಿಸಿ ಬೆರಣಿ ತಯಾರಿಕೆಗೆ ಚಾಲನೆ ನೀಡಲಾಯಿತು.

ವೇ.ಮೂ. ಫಕೀರಯ್ಯ ಹಿರೇಮಠ ಅವರ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಗ್ರಾಮದ ಮುತ್ತೈದೆಯರು ಸಾಂಪ್ರದಾಯಿಕ ವಿಧಿ-ವಿಧಾನಗಳಂತೆ ಸಗಣಿಗೆ ಪೂಜೆ ಸಲ್ಲಿಸಿ ಬೆರಣಿ ತಯಾರಿಸುವ ಕಾರ್ಯಕ್ಕೆ ಚಾಲನೆ ನೀಡಿದರು.

ದೇಶಿ ಹಸುಗಳ ಸಗಣಿಯನ್ನು ಸಂಗ್ರಹಿಸಿ, ಸೂಕ್ತವಾಗಿ ಹದಗೊಳಿಸಿ ಕೈಯಿಂದ ಬೆರಣಿಗಳಾಗಿ ರೂಪಿಸಲಾಗುತ್ತದೆ. ಬಳಿಕ ಬಿಸಿಲಿನಲ್ಲಿ ಒಣಗಿಸಿ ಸಿದ್ಧಪಡಿಸುವ ಈ ಬೆರಣಿಗಳನ್ನು ಶಿವಯೋಗ ಮಂದಿರದಲ್ಲಿ ಭಸ್ಮ ತಯಾರಿಕೆಗೆ ಬಳಸಲಾಗುತ್ತದೆ. ಧಾರ್ಮಿಕ ಕಾರ್ಯಕ್ಕೆ ಅಗತ್ಯವಾಗುವ ಬೆರಣಿಗಳನ್ನು ಮುಂಚಿತವಾಗಿಯೇ ಸಿದ್ಧಪಡಿಸುವುದು ಈ ಸೇವೆಯ ವಿಶೇಷತೆ.

ಪ್ರತಿ ವರ್ಷ 500ಕ್ಕೂ ಹೆಚ್ಚು ಬೆರಣಿಗಳನ್ನು ಸಿದ್ಧಪಡಿಸಿ ಶಿವಯೋಗ ಮಂದಿರದ ಧಾರ್ಮಿಕ ಕಾರ್ಯಕ್ಕೆ ನೀಡುವ ಮೂಲಕ ವೀರೇಶ ನೇಗಲಿ ಅವರು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಯಾವುದೇ ಆಡಂಬರವಿಲ್ಲದೆ, ತಮ್ಮ ಪಾಲಿನ ಸೇವೆ ಎಂಬ ಭಾವನೆಯೊಂದಿಗೆ ಅವರು ಈ ಕಾರ್ಯವನ್ನು ಮುಂದುವರಿಸಿಕೊಂಡು ಬರುತ್ತಿದ್ದಾರೆ.

ಸಗಣಿ ಪೂಜೆಯಿಂದ ಆರಂಭವಾಗುವ ಈ ಕಾರ್ಯ ಬೆರಣಿ ತಯಾರಿಕೆಯಾಗಿ, ಅಂತಿಮವಾಗಿ ಶಿವಯೋಗ ಮಂದಿರದ ಭಸ್ಮ ತಯಾರಿಕೆಗೆ ಸಮರ್ಪಣೆಯಾಗುತ್ತದೆ. ಹೀಗಾಗಿ ಗ್ರಾಮೀಣ ಬದುಕಿನ ಸರಳ ಆಚರಣೆಯೊಂದು ಧಾರ್ಮಿಕ ಸೇವೆಯಾಗಿ ರೂಪ ಪಡೆಯುತ್ತದೆ.

ಆಧುನಿಕ ಬದುಕಿನ ನಡುವೆಯೂ ಹಿರಿಯರು ನಡೆದು ಬಂದಿರುವ ಇಂತಹ ಆಚರಣೆಗಳನ್ನು ಉಳಿಸಿಕೊಂಡು ಬರುತ್ತಿರುವುದು ಗ್ರಾಮೀಣ ಸಂಸ್ಕೃತಿಯ ಜೀವಂತಿಕೆಗೆ ಸಾಕ್ಷಿಯಾಗಿದೆ. ದೇಶಿ ಹಸು, ಮಣ್ಣು, ಕೃಷಿ ಹಾಗೂ ಧಾರ್ಮಿಕ ನಂಬಿಕೆಯೊಂದಿಗೆ ಬೆಸೆದುಕೊಂಡಿರುವ ಈ ಪರಂಪರೆಯಲ್ಲಿ ಪರಿಸರ ಸ್ನೇಹಿ ಬದುಕಿನ ಸಂದೇಶವೂ ಅಡಗಿದೆ.

ಕಾರ್ಯಕ್ರಮದಲ್ಲಿ ಜೆ.ಎ. ಪಾಟೀಲ, ಶಿವಲಿಂಗಪ್ಪ ಕಿರಟಗೇರಿ, ಮಂಜುನಾಥ ಕಿರಟಗೇರಿ ಸೇರಿದಂತೆ ಗ್ರಾಮದ ಮುತ್ತೈದೆಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

> ಬೆರಣಿ ತಯಾರಿಸುವುದು ನಮಗೆ ಕೇವಲ ಒಂದು ಆಚರಣೆಯಲ್ಲ. ಶಿವಯೋಗ ಮಂದಿರದ ಧಾರ್ಮಿಕ ಕಾರ್ಯಕ್ಕೆ ನಮ್ಮ ಕೈಲಾದ ಸೇವೆ ಸಲ್ಲಿಸುವ ಭಾವನೆಯಿದೆ. ವರ್ಷಗಳಿಂದ ಈ ಸೇವೆಯನ್ನು ಮುಂದುವರಿಸಿಕೊಂಡು ಬರುತ್ತಿದ್ದು, ಮುಂದಿನ ಪೀಳಿಗೆಯೂ ಇಂತಹ ಪರಂಪರೆಯನ್ನು ಉಳಿಸಿಕೊಳ್ಳಬೇಕು.
>
> – ವೀರೇಶ ನೇಗಲಿ

# ಶಿವಸಂಗಮದಿಂದ ಶೇ.12 ಡಿವ್ಹಿಡೆಂಡ್



**ವಿಜಯಸಾಕ್ಷಿ ಸುದ್ದಿ, ಗದಗ**

ಶಿವಸಂಗಮ ವಿವಿಧೋದ್ದೇಶಗಳ ಸೌಹಾರ್ದ ಸಹಕಾರಿ ಸಂಘವು 2026ನೇ ಸಾಲಿನಲ್ಲಿ ₹58.68 ಲಕ್ಷ ನಿವ್ವಳ ಲಾಭ ಗಳಿಸಿದ್ದು, ಶೇರುದಾರರಿಗೆ ಶೇ. 12ರಷ್ಟು ಡಿವ್ಹಿಡೆಂಡ್ ನೀಡಲಿದೆ ಎಂದು ಸಂಸ್ಥೆಯ ಅಧ್ಯಕ್ಷ ವೀರಯ್ಯ ಶಿವಕಾಳಿಮಠ ತಿಳಿಸಿದರು.

ನಗರದ ಲಯನ್ಸ್ ಭವನದಲ್ಲಿ ಶನಿವಾರ ನಡೆದ ಸಂಸ್ಥೆಯ 12ನೇ ವಾರ್ಷಿಕ ಸರ್ವಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂಸ್ಥಾಪಕ ಜಿ.ಎಂ. ಪಲ್ಲೇದ ಮಾತನಾಡಿ, ಗ್ರಾಹಕರು ಸಂಸ್ಥೆಯ ಮೇಲಿಟ್ಟಿರುವ ವಿಶ್ವಾಸ ಹಾಗೂ ಸಾಲಗಾರರು ಸಮಯಕ್ಕೆ ಸರಿಯಾಗಿ ಸಾಲ ಮರುಪಾವತಿ ಮಾಡುತ್ತಿರುವುದು ಸಂಸ್ಥೆಯ ಪ್ರಗತಿಗೆ ಪ್ರಮುಖ ಕಾರಣವಾಗಿದೆ ಎಂದರು. ಮುಖ್ಯ ಅತಿಥಿ ಕರ್ನಾಟಕ ರಾಜ್ಯ ಸೌಹಾರ್ದ ಸಹಕಾರಿ ಸಂಯುಕ್ತ ಸಹಕಾರಿ ನಿಯಮಿತದ ನಿರ್ದೇಶಕ ನಾಗರಾಜ ದೇಶಪಾಂಡೆ ಮಾತನಾಡಿ, ಶಿವಸಂಗಮ ಹೆಚ್ಚಿನ ವ್ಯವಹಾರ ಮತ್ತು ಠೇವಣಿ ಮೂಲಕ ಉತ್ತಮ ಲಾಭ ಗಳಿಸಿ ಶೇರುದಾರರಿಗೆ ಶೇ. 12ರಷ್ಟು ಡಿವ್ಹಿಡೆಂಡ್ ನೀಡುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಸಭೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವೀರೇಶ ನೇಗಲಿ, ಗುರಪ್ಪ ಗಾಣಿಗೇರ, ಬಸವರಾಜ ಹಡಪದ, ಗಣಪತಸಾ ಹಬೀಬ, ಶಿವಬಸಪ್ಪ ಯಂಡಿಗೇರಿ, ಜಯದೇವ ಮೆಣಸಗಿ ಸೇರಿದಂತೆ 22 ಸಾಧಕರನ್ನು ಸನ್ಮಾನಿಸಲಾಯಿತು.

ಉಪಾಧ್ಯಕ್ಷ ಮಹೇಶ ಗಾಣಿಗೇರ, ನಿರ್ದೇಶಕರು ಹಾಗೂ ಸಂಸ್ಥೆಯ ಸಿಬ್ಬಂದಿ ಉಪಸ್ಥಿತರಿದ್ದರು. ವ್ಯವಸ್ಥಾಪಕ ಮಲ್ಲಿಕಾರ್ಜುನ ಬಡಿಗೇರ ವಾರ್ಷಿಕ ವರದಿ, ಲಾಭ ವಿಂಗಡಣೆ ಹಾಗೂ ಅಂದಾಜು ಆಯವ್ಯಯ ಪತ್ರಿಕೆ ಮಂಡಿಸಿದರು. ಸಭೆಯಲ್ಲಿ ಗ್ರಾಹಕರು ಹಾಗೂ ಗಣ್ಯರು ಪಾಲ್ಗೊಂಡಿದ್ದರು.

## ಕಸಾಪ ಕಳಂಕ ದೂರ ಮಾಡುವ ಗುರಿ: ಜಾಣಗೆರೆ ವೆಂಕಟೇಶಯ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಶತಮಾನದ ಇತಿಹಾಸ ಹೊಂದಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಚಟುವಟಿಕೆಗಳಿಗೆ ಹೊಸ ಚೈತನ್ಯ ನೀಡುವ ಉದ್ದೇಶದಿಂದ ಕೇಂದ್ರ ಸಮಿತಿ ಅಧ್ಯಕ್ಷ ಸ್ಥಾನದ ಚುನಾವಣೆಗೆ ಸ್ಪರ್ಧಿಸುತ್ತಿರುವುದಾಗಿ ಸಾಹಿತಿ ಜಾಣಗೆರೆ ವೆಂಕಟೇಶಯ್ಯ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಸಾಪದ ಹಿಂದಿನ ಆಡಳಿತದಲ್ಲಿ ನಡೆದಿವೆ ಎನ್ನಲಾದ ಹಲವು ಬೆಳವಣಿಗೆಗಳು ಹಾಗೂ ಆರ್ಥಿಕ ಅವ್ಯವಹಾರಗಳ ಆರೋಪಗಳಿಂದ ಪರಿಷತ್ತಿನ ಘನತೆಗೆ ಧಕ್ಕೆಯಾಗಿದೆ ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ಪರಿಷತ್ತಿನ ಚಟುವಟಿಕೆಗಳನ್ನು ಪುನಶ್ಚೇತನಗೊಳಿಸುವ ನಿಟ್ಟಿನಲ್ಲಿ ಚುನಾವಣಾ ಕಣಕ್ಕಿಳಿಯಲು ನಿರ್ಧರಿಸಿರುವುದಾಗಿ ತಿಳಿಸಿದರು.

ಹಿಂದಿನ ಆಡಳಿತದ ಅವಧಿಯಲ್ಲಿ ಬೈಲಾ ತಿದ್ದುಪಡಿ, ಪದಾಧಿಕಾರಿಗಳ ನೇಮಕ, ಜಿಲ್ಲಾಧ್ಯಕ್ಷರ ಮೇಲಿನ ನಿಯಂತ್ರಣ ಹಾಗೂ ಪರಿಷತ್ತಿನ ಚಟುವಟಿಕೆಗಳ ನಿಷ್ಕ್ರಿಯತೆ ಕುರಿತು ಅವರು ಆರೋಪಗಳನ್ನು ಮಾಡಿದರು. ಈ ವಿಚಾರದಲ್ಲಿ ಸಾಹಿತಿಗಳು ವಿರೋಧ ವ್ಯಕ್ತಪಡಿಸಿದ್ದು, ಕಾನೂನು ಹೋರಾಟವೂ ನಡೆದಿತ್ತು. ಅಂತಿಮವಾಗಿ ಸರ್ಕಾರದ ಕ್ರಮಕ್ಕೆ ಕಾರಣವಾಯಿತು ಎಂದು ವೆಂಕಟೇಶಯ್ಯ ಹೇಳಿದರು.

ಪರಿಷತ್ತಿನ ಘನತೆ ಹಾಗೂ ಸ್ವಾಯತ್ತತೆ ಕಾಪಾಡುವುದು, ಸಾಹಿತ್ಯಿಕ ಚಟುವಟಿಕೆಗಳಿಗೆ ಆದ್ಯತೆ ನೀಡುವುದು ಮತ್ತು ರಾಜ್ಯಾದ್ಯಂತ ಕನ್ನಡ ಸಾಹಿತ್ಯದ ಚಟುವಟಿಕೆಗಳನ್ನು ಬಲಪಡಿಸುವ ಉದ್ದೇಶದಿಂದ ಚುನಾವಣೆಗೆ ಸ್ಪರ್ಧಿಸುತ್ತಿರುವುದಾಗಿ ಅವರು ತಿಳಿಸಿದರು.

ಆರ್.ಜಿ. ಹಳ್ಳಿ ನಾಗರಾಜ ಮಾತನಾಡಿ, ಜಾಣಗೆರೆ ವೆಂಕಟೇಶಯ್ಯ ಹಿರಿಯ ಸಾಹಿತಿಯಾಗಿದ್ದು, ಲಂಕೇಶ್ ಅವರೊಂದಿಗೆ ಕಾರ್ಯನಿರ್ವಹಿಸಿದ್ದಾರೆ. ಸಿನಿಮಾ ಪತ್ರಕರ್ತರಾಗಿ ಹಾಗೂ ಕನ್ನಡಪರ ಹೋರಾಟಗಳಲ್ಲಿ ಭಾಗವಹಿಸಿರುವ ಅನುಭವ ಹೊಂದಿದ್ದಾರೆ. ಈ ಹಿನ್ನೆಲೆಯಲ್ಲಿ ಅವರನ್ನು ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಭ್ಯರ್ಥಿಯಾಗಿ ಬೆಂಬಲಿಸಿ ರಾಜ್ಯಾದ್ಯಂತ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಎನ್. ಜೀವನ್, ಎ.ಎಸ್. ಮಕಾನದಾರ್, ಬಿ.ಬಿ. ಪಾಟೀಲ ಹಾಗೂ ಐ.ಕೆ. ಕಮ್ಮಾರ್ ಉಪಸ್ಥಿತರಿದ್ದರು.

# ಗಣೇಶನಿಗೆ ಬ್ರೋಕರ್ ಸಂಘದ ವಿಶೇಷ ಪೂಜೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಾನಯೋಗಿ ಪಂ. ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಿರುವ ಶ್ರೀ ಗಣೇಶ ಮೂರ್ತಿಗೆ 7ನೇ ದಿನದ ವಿಶೇಷ ಪೂಜೆಯನ್ನು ಗದಗ ಬ್ರೋಕರ್ ಸಂಘದ ವತಿಯಿಂದ ಶ್ರದ್ಧಾ-ಭಕ್ತಿಯಿಂದ ನೆರವೇರಿಸಲಾಯಿತು.

ರವಿವಾರ ಬೆಳಗ್ಗೆ ಗಣೇಶ ಮೂರ್ತಿಗೆ ವಿಶೇಷ ಅಭಿಷೇಕ, ಪುಷ್ಪಾಲಂಕಾರ ಹಾಗೂ ಮಹಾಮಂಗಳಾರತಿ ನೆರವೇರಿತು. ಎಪಿಎಂಸಿ ಮಾರುಕಟ್ಟೆಯಲ್ಲಿ ವ್ಯಾಪಾರ-ವಹಿವಾಟು ಉತ್ತಮವಾಗಿ ನಡೆಯಲಿ, ರೈತರು ಹಾಗೂ ವರ್ತಕರಿಗೆ ಸಮೃದ್ಧಿ ದೊರೆಯಲಿ ಎಂದು ಬ್ರೋಕರ್ ಸಂಘದ ಪದಾಧಿಕಾರಿಗಳು ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಗದಗ ಬ್ರೋಕರ್ ಸಂಘದ ಶಂಭು ಪಟ್ಟದಕಲ್ಲು, ವಿನಾಯಕ ಪಾನಕಟ್ಟಿ, ರವಿ ಬುರಡೆ ಹಾಗೂ ಶ್ರವಣ ಭಾಗಮಾರ, ಮಧುಸೂದನ್ ಪುಣೇಕರ, ಚಂದ್ರು ದನ್ನೂರಮಠ, ಅಶೋಕ ಸಂಕಣ್ಣವರ, ಮಂಜು ಸಂಕಟಿ, ಉಮರ್ ಕೌತಾಳ ಅವರನ್ನು ಗಜಾನನೋತ್ಸವ ಟ್ರಸ್ಟ್ ವತಿಯಿಂದ ಸನ್ಮಾನಿಸಲಾಯಿತು.

ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲೀಮನಿ, ಸಹಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜಿ. ಗಾಣಿಗೇರ ಸೇರಿದಂತೆ ಪದಾಧಿಕಾರಿಗಳು ಹಾಗೂ ಅಪಾರ ಸಂಖ್ಯೆಯ ಭಕ್ತರು ಉಪಸ್ಥಿತರಿದ್ದರು.

# ಎಪಿಎಂಸಿ ಗಣೇಶನಿಗೆ 6ನೇ ದಿನದ ವಿಶೇಷ ಪೂಜೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಾನಯೋಗಿ ಪಂ. ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಿರುವ ಗಣೇಶ ಮೂರ್ತಿಗೆ 6ನೇ ದಿನದ ವಿಶೇಷ ಪೂಜೆ ಶ್ರದ್ಧಾ-ಭಕ್ತಿಯಿಂದ ನೆರವೇರಿತು.

ಗಣೇಶ ಮೂರ್ತಿಗೆ ವಿಶೇಷ ಅಲಂಕಾರ, ರಂಗಪೂಜೆ ಹಾಗೂ ಮಹಾಮಂಗಳಾರತಿ ನಡೆಯಿತು.

ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿ, ಕೈಗಾರಿಕಾ ಅಭಿವೃದ್ಧಿ, ವರ್ತಕರ ಹಿತರಕ್ಷಣೆ ಹಾಗೂ ರೈತರ ಆದಾಯ ಹೆಚ್ಚಿಸುವ ನಿಟ್ಟಿನಲ್ಲಿ ಕೃಷಿ ಆಧಾರಿತ ಕೈಗಾರಿಕೆಗಳಿಗೆ ಉತ್ತೇಜನ ನೀಡಬೇಕು ಎಂದರು.

ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಲು ಹೊಸ ಹೂಡಿಕೆಗಳನ್ನು ಆಕರ್ಷಿಸುವ ಅಗತ್ಯವಿದೆ.

ಸಣ್ಣ ಉದ್ಯಮಿಗಳು ಹಾಗೂ ಸಾಂಪ್ರದಾಯಿಕ ಕಲಾವಿದರಿಗೆ ಹಣಕಾಸು ಮತ್ತು ಮಾರುಕಟ್ಟೆ ಸೌಲಭ್ಯ ಕಲ್ಪಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಸೇರಿದಂತೆ ಪದಾಧಿಕಾರಿಗಳು ಹಾಗೂ ಪ್ರಮುಖರನ್ನು ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಸನ್ಮಾನಿಸಲಾಯಿತು.

ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಪದಾಧಿಕಾರಿಗಳು, ಎಪಿಎಂಸಿ ವರ್ತಕರು, ರೈತರು, ಸಾರ್ವಜನಿಕರು ಹಾಗೂ ಚೇಂಬರ್ ಆಫ್ ಕಾಮರ್ಸ್ ಮುಖಂಡರು ಉಪಸ್ಥಿತರಿದ್ದರು.

## ಆನ್‌ಲೈನ್ ನೋಂದಣಿ ಕಡ್ಡಾಯ

**ಗದಗ:** 2026-27ನೇ ಸಾಲಿನ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಸೆ.23 ಮತ್ತು 24ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾ ಂಗಣದಲ್ಲಿ ನಡೆಯಲಿದ್ದು, ಸ್ಪರ್ಧೆಯಲ್ಲಿ ಪಾಲ್ಗೊಳ್ಳುವ ಕ್ರೀಡಾಪಟುಗಳು ಆನ್‌ಲೈನ್ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ ಭಾಗವಹಿಸುವ ಕ್ರೀಡಾಪಟುಗಳು ಕ್ಯೂಆರ್ ಕೋಡ್ ಮೂಲಕ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು ಎಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಚ್ಛತೆಗೆ ವಿದ್ಯಾರ್ಥಿಗಳ ಪ್ರತಿಜ್ಞೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯಲ್ಲಿ ಶನಿವಾರ 'ಸ್ವಚ್ಛತಾ ಹಿ ಸೇವಾ' ಅಭಿಯಾನದಡಿ ವಿದ್ಯಾರ್ಥಿಗಳಿಗೆ ಸ್ವಚ್ಛತಾ ಪ್ರತಿಜ್ಞೆ ಬೋಧಿಸಲಾಯಿತು.

'ಸ್ವಚ್ಛತೆಯಲ್ಲಿ ಸಹಭಾಗಿತ್ವ, ಸ್ವಚ್ಛ ಭಾರತ-ವಿಕಸಿತ ಭಾರತ' ಆಶಯದಡಿ ನಡೆದ ಕಾರ್ಯಕ್ರಮದಲ್ಲಿ ಶಾಲಾ ಮುಖ್ಯ ಶಿಕ್ಷಕ ಜೆ.ಡಿ. ಲಮಾಣಿ ಮಾತನಾಡಿ, ಪ್ರತಿಯೊಬ್ಬ ನಾಗರಿಕರು ಸ್ವಚ್ಛತಾ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಪುರಸಭೆಯ ಕಮ್ಯೂನಿಟಿ ಮೊಬಿಲೈಸರ್‌ಗಳಾದ ಶಿಲ್ಪಾ ಹೊತಗಿಮಠ ಹಾಗೂ ರೇಣುಕಾ ಬನ್ನಿ ಮಾತನಾಡಿ, ಮನೆಗಳಿಂದ ಸಂಗ್ರಹವಾಗುವ ಕಸವನ್ನು ಪುರಸಭೆಯ ಕಸದ ವಾಹನಕ್ಕೆ ನೀಡುವ ಮೂಲಕ ಪಟ್ಟಣದ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡಲು ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಎಂ.ಸಿ. ಹಿರೇಮಠ, ಶೀಲಾ ತಳವಾರ, ಎಸ್.ಎಸ್. ಮಠದ, ಆರ್.ಸಿ. ಉಮಚಗಿ, ಎಸ್.ಎಂ. ಹಾದಿಮನಿ, ಪಿ.ಎಲ್. ಪಾಟೀಲ, ಡಿ.ಜಿ. ವೈದ್ಯ, ಸುಜಾತ ಮಾಗಡಿ, ಕವಿತಾ ಘಂಟಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಮಾದರಿ ಸೇವಾ ಕಾರ್ಯಕ್ಕೆ ಶಾಸಕ ಎಚ್.ಕೆ.ಪಾಟೀಲ ಮೆಚ್ಚುಗೆ

# ಚವಡಿ ಕುಟುಂಬದ ಸಾಮಾಜಿಕ, ಶೈಕ್ಷಣಿಕ ಕಾರ್ಯ ಶ್ಲಾಘನೀಯ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಡಾ. ಎಸ್.ಸಿ. ಚವಡಿ ಕುಟುಂಬದ ಸಾಮಾಜಿಕ ಹಾಗೂ ಶೈಕ್ಷಣಿಕ ಕಾರ್ಯಗಳು ಇಂದಿನ ಪೀಳಿಗೆಗೆ ದಾರಿದೀಪವಾಗಿದ್ದು, ಅವರ ಸೇವಾ ಕಾರ್ಯ ಶ್ಲಾಘನೀಯವಾಗಿದೆ ಎಂದು ಶಾಸಕ ಎಚ್.ಕೆ. ಪಾಟೀಲ ಹೇಳಿದರು.



ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಡಾ. ಎಸ್.ಸಿ. ಚವಡಿ ಅವರ ಚವಡಿ ಪ್ರತಿಷ್ಠಾನದಿಂದ ಆಯೋಜಿಸಿದ್ದ ಮಹಾಂತಶ್ರೀ ಪ್ರಶಸ್ತಿ ಪ್ರದಾನ ಹಾಗೂ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಾ. ಎಸ್.ಸಿ. ಚವಡಿ ಅವರು ವೈದ್ಯ ವೃತ್ತಿಯೊಂದಿಗೆ ಸಾಮಾಜಿಕ ಹಾಗೂ ಶೈಕ್ಷಣಿಕ ಕ್ಷೇತ್ರದಲ್ಲೂ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ದತ್ತಿ ಉಪನ್ಯಾಸಗಳ ಮೂಲಕ ನಾಡಿನ ಹೆಸರಾಂತ ಸಂಗೀತ ಕಲಾವಿದರು ಹಾಗೂ ದಾರ್ಶನಿಕರನ್ನು ಮುಳಗುಂದಕ್ಕೆ ಕರೆತಂದು, ಅವರ ವಿಚಾರಗಳನ್ನು ಜನರಿಗೆ ಪರಿಚಯಿಸುವ ಕಾರ್ಯ ಮಾಡುತ್ತಿದ್ದಾರೆ. ಚವಡಿ ಪ್ರತಿಷ್ಠಾನ ಸ್ಥಾಪಿಸಿ ₹10 ಲಕ್ಷ ದತ್ತಿ ನಿಧಿ ನಿಯೋಜಿಸಿರುವುದು ಅವರ ಸಾಮಾಜಿಕ ಕಾಳಜಿಗೆ ಸಾಕ್ಷಿಯಾಗಿದೆ ಎಂದರು.

ಪ್ರತಿಷ್ಠಾನದ ಮೊದಲ ಮಹಾಂತಶ್ರೀ ಪ್ರಶಸ್ತಿಯನ್ನು ಪದ್ಮಶ್ರೀ ಪಂಡಿತ ಡಾ. ಎಂ.

> ಚವಡಿ ಕುಟುಂಬದ ಸಾಮಾಜಿಕ ಹಾಗೂ ಶೈಕ್ಷಣಿಕ ಕಾರ್ಯಗಳು ಇಂದಿನ ಪೀಳಿಗೆಗೆ ಮಾದರಿಯಾಗಿವೆ.
>
> – ಎಚ್.ಕೆ. ಪಾಟೀಲ

ವೆಂಕಟೇಶಕುಮಾರ ಅವರಿಗೆ ಪ್ರದಾನ ಮಾಡಿರುವುದು ಪ್ರಶಸ್ತಿಯ ಮೌಲ್ಯವನ್ನು ಹೆಚ್ಚಿಸಿದೆ. ಅಲ್ಲದೆ, ಪದ್ಮವಿಭೂಷಣ ಪಂಡಿತ ಡಾ. ಮಲ್ಲಿಕಾರ್ಜುನ ಮನ್ಸೂರ ಅವರ ಕುರಿತು ಉಪನ್ಯಾಸ ಆಯೋಜಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ. ಇಂತಹ ಸಾಮಾಜಿಕ ಹಾಗೂ ಶೈಕ್ಷಣಿಕ ಚಟುವಟಿಕೆಗಳು ಸಮಾಜಕ್ಕೆ ಮಾದರಿಯಾಗಿವೆ ಎಂದು ಹೇಳಿದರು.

ಮಹಾಂತಶ್ರೀ ಪ್ರಶಸ್ತಿ ಪುರಸ್ಕೃತ ಡಾ. ಎಂ. ವೆಂಕಟೇಶಕುಮಾರ ಮಾತನಾಡಿ, ಡಾ. ಎಸ್.ಸಿ. ಚವಡಿ ಅವರು ವೈದ್ಯ ವೃತ್ತಿಯ ಜತೆಗೆ ಸಂಗೀತ ಕಲಾವಿದರು ಹಾಗೂ ದಾರ್ಶನಿಕರನ್ನು ಮುಳಗುಂದಕ್ಕೆ ಕರೆತಂದು, ಅವರ ವಿಚಾರಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯ ಮಾಡುತ್ತಿರುವುದು ಅಭಿನಂದನೀಯ. ಮಹಾಂತಶ್ರೀ ಪ್ರಶಸ್ತಿ ದೊರೆತಿರುವುದು ಸಂತಸ ತಂದಿದೆ ಎಂದರು.

ಧಾರವಾಡದ ಮುರುಘಾಮಠದ ಡಾ. ಮಲ್ಲಿಕಾರ್ಜುನ ಮಹಾಸ್ವಾಮೀಜಿ ಮಾತನಾಡಿ, ಡಾ. ಎಸ್.ಸಿ. ಚವಡಿ ಅವರು ಪ್ರತಿ ವರ್ಷ ಕನ್ನಡ ಸಾಹಿತ್ಯ ಪರಿಷತ್ತಿನ ಘಟಕದ ಮೂಲಕ 12 ತಿಂಗಳ ದತ್ತಿ ಉಪನ್ಯಾಸಗಳನ್ನು ಆಯೋಜಿಸುತ್ತಿದ್ದಾರೆ.

ಇದೇ ಮಾದರಿಯಲ್ಲಿ ಚವಡಿ ಪ್ರತಿಷ್ಠಾನ ಸ್ಥಾಪಿಸಿ ಡಾ. ಎಂ. ವೆಂಕಟೇಶಕುಮಾರ ಅವರಿಗೆ ₹25 ಸಾವಿರ ದತ್ತಿ ನೀಡಿರುವುದಲ್ಲದೆ, ವಿದ್ಯಾರ್ಥಿನಿ ವರ್ಷಾ ಬಾರಕೇರ ಅವರ ಶೈಕ್ಷಣಿಕ ವಿದ್ಯಾಭ್ಯಾಸಕ್ಕೆ ₹10 ಸಾವಿರ ನೆರವು ನೀಡಿರುವುದು ಸಂತಸದ ಸಂಗತಿ ಎಂದರು.

ಕಾರ್ಯಕ್ರಮದಲ್ಲಿ ಧಾರವಾಡದ ಮುರುಘಾಮಠದ ಡಾ. ಮಲ್ಲಿಕಾರ್ಜುನ ಮಹಾಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗದೇವರು ಸಮಾರಂಭದ ಸಮ್ಮುಖ ವಹಿಸಿದ್ದರು.

ಪದ್ಮವಿಭೂಷಣ ಪಂಡಿತ ಡಾ. ಮಲ್ಲಿಕಾರ್ಜುನ ಮನ್ಸೂರ ಅವರ ಕುರಿತು ಡಾ. ಮೃತ್ಯುಂಜಯ ಶೆಟ್ಟರ ಉಪನ್ಯಾಸ ನೀಡಿದರು.

ಅಧ್ಯಕ್ಷತೆಯನ್ನು ಡಾ. ಶಿವಕುಮಾರ ಚವಡಿ ವಹಿಸಿದ್ದರು. ಮಾಜಿ ಸಚಿವ ಎಚ್.ಕೆ. ಪಾಟೀಲ, ಡಾ. ಆನಂದ ಪಾಂಡುರಂಗಿ, ಎಂ.ಡಿ. ಬಟ್ಟೂರ, ಎಸ್.ಎಂ. ನೀಲಗುಂದ, ಅಕ್ಕಮಹಾದೇವಿ ಆಲೂರ, ಡಾ. ಎಸ್.ಸಿ. ಚವಡಿ, ಮಂಜುನಾಥ ಮಟ್ಟಿ ಹಾಗೂ ಎಸ್.ಎಂ. ಉಜ್ಜಣ್ಣವರ ಉಪಸ್ಥಿತರಿದ್ದರು.

# ಮೂರು ಶಾಲೆಗಳಲ್ಲಿ ಮೌಲ್ಯ ಶಿಕ್ಷಣ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿದ್ಯಾರ್ಥಿಗಳಲ್ಲಿ ಸತ್ಯ, ಪ್ರಾಮಾಣಿಕತೆ, ಸಂಸ್ಕಾರ ಹಾಗೂ ಗುರು–ಹಿರಿಯರ ಬಗ್ಗೆ ಗೌರವ ಬೆಳೆಸುವ ಉದ್ದೇಶದಿಂದ ಹಾಲಕೆರೆ ಗ್ರಾಮದ ಮೂರು ಸರ್ಕಾರಿ ಶಾಲೆಗಳಲ್ಲಿ ಮೌಲ್ಯ ಶಿಕ್ಷಣ ಅನುಷ್ಠಾನ ಕಾರ್ಯಕ್ರಮ ನಡೆಯಿತು.



ಜಿಲ್ಲಾ ಪಂಚಾಯಿತಿ ಗದಗ, ಶಾಲಾ ಶಿಕ್ಷಣ ಇಲಾಖೆ ಹಾಗೂ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠ, ಹಾಲಕೆರೆ ಇವರ ಸಹಯೋಗದಲ್ಲಿ ಆರ್‌ಎಂಎಸ್‌ಎ ಪ್ರೌಢಶಾಲೆ, ಸರ್ಕಾರಿ ಕನ್ನಡ ಗಂಡುಮಕ್ಕಳ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಸರ್ಕಾರಿ ಕನ್ನಡ ಹೆಣ್ಣುಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ ಪರಮಪೂಜ್ಯ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ಸತ್ಯವಂತರು, ನೀತಿವಂತರು ಹಾಗೂ ಪ್ರಾಮಾಣಿಕರಾಗಿ ಬೆಳೆಯಬೇಕು. ಗುರು–ಹಿರಿಯರ ಬಗ್ಗೆ ಗೌರವ, ಗುರುಗಳಿಗೆ ಕೃತಜ್ಞತೆ ಹಾಗೂ ಸಮಾಜದ ಋಣ ತೀರಿಸುವ ಮನೋಭಾವವನ್ನು ಮಕ್ಕಳಲ್ಲಿ ಬೆಳೆಸುವುದು ಅಗತ್ಯ ಎಂದರು.

ಮೌಲ್ಯ ಶಿಕ್ಷಣಕ್ಕೆ ಮಾತ್ರ ಸೀಮಿತವಾಗದೆ ಮೂರು ಶಾಲೆಗಳ ಶೈಕ್ಷಣಿಕ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡಲಾಗುವುದು. ಗ್ರಾಮದ ಹಿರಿಯರು ಹಾಗೂ ಶಿಕ್ಷಕರ ಸಹಕಾರದೊಂದಿಗೆ ಶಾಲೆಗಳನ್ನು ಆದರ್ಶ ಶಾಲೆಗಳನ್ನಾಗಿ ರೂಪಿಸುವುದು ಶ್ರೀಮಠದ ಉದ್ದೇಶವಾಗಿದೆ ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ವಿದ್ಯಾರ್ಥಿಗಳಲ್ಲಿ ಸಂಸ್ಕಾರ ಮತ್ತು ಮೌಲ್ಯಗಳನ್ನು ಬೆಳೆಸುವ ನಿಟ್ಟಿನಲ್ಲಿ ಶ್ರೀಮಠದ ಕಾಳಜಿ ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಮೂರು ಶಾಲೆಗಳಿಗೆ ಶ್ರೀಮಠದ ವತಿಯಿಂದ ಮೌಲ್ಯ ಶಿಕ್ಷಣಕ್ಕೆ ಸಂಬಂಧಿಸಿದ ಪುಸ್ತಕಗಳನ್ನು ವಿತರಿಸಲಾಯಿತು. 2025–26ನೇ ಸಾಲಿನ ಎಸ್‌–ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯಧಿಕ ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ವಿದ್ಯಾರ್ಥಿಗಳು ಮೌಲ್ಯ ಶಿಕ್ಷಣಕ್ಕೆ ಸಂಬಂಧಿಸಿದ ವಿವಿಧ ಚಟುವಟಿಕೆಗಳು ಹಾಗೂ ಪ್ರಾತ್ಯಕ್ಷಿಕೆಗಳನ್ನು ಪ್ರದರ್ಶಿಸಿದರು.

ಎಸ್‌ಡಿಎಂಸಿ ಅಧ್ಯಕ್ಷರಾದ ಅಂದಪ್ಪ ಕುರಿ, ದೇವೇಂದ್ರಪ್ಪ ಕಡೆಮನಿ, ಮುಖ್ಯೋಪಾಧ್ಯಾಯರಾದ ಎಸ್.ಬಿ. ಸಂಕಣ್ಣವರ, ಬಿ.ಆರ್. ಹಿರೇಹಾಳ, ಸಾವಿತ್ರಮ್ಮ ಚುಂಚಾ, ಸದಸ್ಯೆ ಅನ್ನಪೂರ್ಣ ಬಾರಡ್ಡಿ ಸೇರಿದಂತೆ ಗ್ರಾಮದ ಹಿರಿಯರು, ಎಸ್‌ಡಿಎಂಸಿ ಸದಸ್ಯರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಜಗದೀಶ್ ನಿರೂಪಿಸಿದರು. ಕಾಲವಾಡ ವಂದಿಸಿದರು.

### ಸಚಿವ ಸಂಪುಟ ಸಭೆ ಹೆಸರಿನಲ್ಲಿ ಜನರ ಮೂಗಿಗೆ ತುಪ್ಪ ಬೇಡ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜಿಲ್ಲೆ ಜಿಲ್ಲೆಗಳಲ್ಲಿ ಸಚಿವ ಸಂಪುಟ ಸಭೆ ನಡೆಸಿ ನೂರಾರು ಕೋಟಿ ರೂ.ಗಳ ಯೋಜನೆಗಳನ್ನು ಘೋಷಿಸುವ ಬದಲು, ಈಗಾಗಲೇ ಘೋಷಿಸಿರುವ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಗೊಳಿಸುವತ್ತ ಸರ್ಕಾರ ಗಮನಹರಿಸಬೇಕು ಎಂದು ಬಿಜೆಪಿ ಮುಖಂಡ ಉಮೇಶ ಪಾಟೀಲ ಆಗ್ರಹಿಸಿದ್ದಾರೆ.



ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸಚಿವ ಸಂಪುಟ ಸಭೆಗಳಲ್ಲಿ ಘೋಷಿಸುವ ಯೋಜನೆಗಳಿಗೆ ಅಗತ್ಯ ಅನುದಾನ ಬಿಡುಗಡೆ ಮಾಡಿ, ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಬೇಕು.

ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಘೋಷಿಸಿದ ಹಲವು ಯೋಜನೆಗಳು ಇನ್ನೂ ಅನುಷ್ಠಾನಗೊಂಡಿಲ್ಲ. ಇದೀಗ ಮಂಗಳೂರಿನಲ್ಲಿ ನಡೆದ ಸಭೆಯೂ ಅದೇ ಮಾದರಿಯಾಗಿದೆ ಎಂದು ಟೀಕಿಸಿದ್ದಾರೆ.

ರಾಜ್ಯದ ಹಲವು ಭಾಗಗಳಲ್ಲಿ ಮಳೆ ಕೊರತೆಯಿಂದ ರೈತರು ಹಾಗೂ ಗ್ರಾಮೀಣ ಜನರು ಸಂಕಷ್ಟದಲ್ಲಿದ್ದಾರೆ.

ಇಂತಹ ಸಂದರ್ಭದಲ್ಲಿ ಸಚಿವ ಸಂಪುಟ ಸಭೆಗಳ ಪ್ರಚಾರಕ್ಕಿಂತ ಜನರ ನೈಜ ಸಮಸ್ಯೆಗಳಿಗೆ ಸರ್ಕಾರ ಆದ್ಯತೆ ನೀಡಬೇಕು.

ಬರದ ಪರಿಸ್ಥಿತಿ ಎದುರಿಸುತ್ತಿರುವ ತಾಲೂಕುಗಳ ವಾಸ್ತವ ಸ್ಥಿತಿ ಪರಿಶೀಲಿಸಿ, ಅಗತ್ಯವಿದ್ದಲ್ಲಿ ಬರ ಘೋಷಿಸಿ ರೈತರಿಗೆ ಬೆಳೆ ನಷ್ಟ ಪರಿಹಾರ, ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

### ಬರಪೀಡಿತ ಪಟ್ಟಿಗೆ ಗದಗ, ಮುಂಡರಗಿ, ರೋಣ ಸೇರ್ಪಡೆ: ರಾಯರೆಡ್ಡಿ ಭರವಸೆ

# ತಿಮ್ಮಾಪೂರ ರಸ್ತೆಗೆ 15 ದಿನದಲ್ಲಿ ಭೂಮಿಪೂಜೆ

**ವಿಜಯಸಾಕ್ಷಿ ಸುದ್ದಿ, ಗದಗ**

ತಿಮ್ಮಾಪೂರ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಹದಗೆಟ್ಟ ರಸ್ತೆಗಳನ್ನು ಡಾಂಬರೀಕರಣ ಮಾಡಲು ಈಗಾಗಲೇ ಕ್ರಿಯಾಯೋಜನೆ ಸಿದ್ಧವಾಗಿದ್ದು, 15 ದಿನಗಳೊಳಗೆ ಭೂಮಿಪೂಜೆ ನೆರವೇರಿಸಲಾಗುವುದು ಎಂದು ಉನ್ನತ ಶಿಕ್ಷಣ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಭರವಸೆ ನೀಡಿದರು.

ತಿಮ್ಮಾಪೂರ ಗ್ರಾಮಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಅವರು ಗ್ರಾಮದ ರಸ್ತೆ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡುವಂತೆ ಸಚಿವರಿಗೆ ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿದ ಸಚಿವರು, ರೋಣ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ ಅವರೊಂದಿಗೆ ಸೇರಿ ಗ್ರಾಮದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸುವುದಾಗಿ ತಿಳಿಸಿದರು.

ರಾಜ್ಯದಲ್ಲಿ ಬರಗಾಲದ ಪರಿಸ್ಥಿತಿ ಇರುವ ಹಿನ್ನೆಲೆಯಲ್ಲಿ ತಮಗೆ ಯಾವುದೇ ಮಾಲೆ, ಶಾಲು ಹಾಕಿ ಸನ್ಮಾನ ಮಾಡಿಸಿಕೊಳ್ಳುವುದಿಲ್ಲ ಎಂದು ಸಚಿವರು ಇದೇ ವೇಳೆ ಹೇಳಿದರು. ಗದಗ ಜಿಲ್ಲೆಯ ಗದಗ, ಮುಂಡರಗಿ ಹಾಗೂ ರೋಣ ತಾಲೂಕುಗಳನ್ನು ಇನ್ನೊಂದು ವಾರದೊಳಗೆ ಬರಪೀಡಿತ ಪಟ್ಟಿಗೆ ಸೇರಿಸಲಾಗುವುದು ಎಂದು ರೈತ ಸಂಘದ ಮುಖಂಡರಿಗೆ ಸಚಿವರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಶರಣಪ್ಪ ಜೋಗಿನ, ಬಾಳಪ್ಪ ಗಂಗರಾತ್ರಿ, ಹುಚ್ಚೀರಪ್ಪ ಜೋಗಿನ, ವೆಂಕಟೇಶ ಸತ್ಯಪ್ಪನವರ, ಶಿವಕುಮಾರ ಯತ್ನಟ್ಟಿ, ಯಲ್ಲಪ್ಪ ಗದಗ, ಬಸವರಾಜ ದೇವರವರ, ರಾಮಣ್ಣ ಖಂಡ್ರೆ, ಬಸವರಾಜ ಡಂಬಳ, ಮಾರುತಿ ಬಾಬರಿ, ರವಿ ಗುಡ್ಡಪ್ಪನವರ ಸೇರಿದಂತೆ ಗ್ರಾಮದ ಹಿರಿಯರು, ರೈತ ಸಂಘದ ಪದಾಧಿಕಾರಿಗಳು ಹಾಗೂ ನೂರಾರು ಜನರು ಉಪಸ್ಥಿತರಿದ್ದರು.



# ಕೋಡಿಕೊಪ್ಪ ಶಾಲೆಗೆ ಖೋ–ಖೋದಲ್ಲಿ ಪ್ರಥಮ ಸ್ಥಾನ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲ ವಲಯ ಮಟ್ಟದ ಪ್ರಾಥಮಿಕ ಶಾಲೆಗಳ ಬಾಲಕರ ಖೋ–ಖೋ ಪಂದ್ಯಾವಳಿಯಲ್ಲಿ ಕೋಡಿಕೊಪ್ಪ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬಾಲಕರ ತಂಡ ಪ್ರಥಮ ಸ್ಥಾನ ಪಡೆದು ತಾಲೂಕು ಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗಿದೆ.

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಪ್ರಧಾನ ಗುರುಗಳು ಹಾಗೂ ಶಿಕ್ಷಕ ಬಳಗ ಅಭಿನಂದನೆ ಸಲ್ಲಿಸಿ, ತಾಲೂಕು ಮಟ್ಟದಲ್ಲಿಯೂ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದ್ದಾರೆ.

## ನಿಧನ



### ಬಸವಣ್ಣೆಯ್ಯ ಹಿರೇಮಠ

ಗದಗ: ಶಿವಬಸವ ಜನಕಲ್ಯಾಣ ಸಂಸ್ಥೆ ಹಾಗೂ ಸೋಮೇಶ ಹಿರೇಮಠ ಸೇವಾ ಪ್ರತಿಷ್ಠಾನದ ಅಧ್ಯಕ್ಷರು, ಹಿರಿಯ ಸಾಮಾಜಿಕ ಧುರೀಣರಾದ ಬಸವಣ್ಣೆಯ್ಯ ಸಂಗಯ್ಯ ಹಿರೇಮಠ (64) ಅವರು ಶನಿವಾರ ಬೆಳಗಿನ ಜಾವ ನಿಧನರಾದರು. ಮೃತರಿಗೆ ಪತ್ನಿ ಹಾಗೂ ಇಬ್ಬರು ಪುತ್ರಿಯರಿದ್ದಾರೆ. ಶನಿವಾರ ಸಂಜೆ ಗದಗ ತಾಲೂಕಿನ ನಾಗಾವಿ ಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಿತು.

### ಚುರ್ಚಿಹಾಳ ಜಾಕ್‌ವೆಲ್‌ಗೆ ಮುತ್ತಿಗೆ; ಗ್ರಾಮಸ್ಥರ ಆಕ್ರೋಶ

# ಕೆರೆ ತುಂಬಿಸಲು ಕಾಲುವೆಗೆ ನೀರು ಬಿಡಿ



> ಮಳೆ ಕೊರತೆಯಿಂದ ಈಗಾಗಲೇ ಗ್ರಾಮದಲ್ಲಿ ನೀರಿನ ಸಮಸ್ಯೆ ಎದುರಾಗಿದೆ. ಕೆರೆಗಳು ತುಂಬಿದರೆ ಜನರು, ಜಾನುವಾರುಗಳು ಹಾಗೂ ರೈತರಿಗೆ ದೊಡ್ಡ ಅನುಕೂಲವಾಗಲಿದೆ. ಅಧಿಕಾರಿಗಳು ನೀಡಿರುವ ಭರವಸೆಯಂತೆ ಸೋಮವಾರದಿಂದ ನೀರು ಹರಿಸಿ ಕೆರೆಗಳನ್ನು ತುಂಬಿಸಬೇಕು. ಇಲ್ಲದಿದ್ದರೆ ಮತ್ತೆ ಹೋರಾಟ ಅನಿವಾರ್ಯವಾಗಲಿದೆ.
>
> – ಮಹೇಶ ಮುಸ್ಕಿನಭಾವಿ, ತಾ.ಪಂ. ಮಾಜಿ ಸದಸ್ಯ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಸಿಂಗಟಾಲೂರು ಏತ ನೀರಾವರಿ ಯೋಜನೆಯ ಕಾಲುವೆಯಿಂದ ಲಕ್ಕುಂಡಿ ಗ್ರಾಮದ ಎರಡು ಬೃಹತ್ ಕೆರೆಗಳನ್ನು ತುಂಬಿಸಬೇಕು ಎಂದು ಆಗ್ರಹಿಸಿ ರೈತರು ಹಾಗೂ ಗ್ರಾಮಸ್ಥರು ಶನಿವಾರ ಪ್ರತಿಭಟನೆ ನಡೆಸಿದರು.

ಲಕ್ಕುಂಡಿ ಸಮೀಪದ ಚುರ್ಚಿಹಾಳ ಗ್ರಾಮದ ಬಳಿಯ ತುಂಗಭದ್ರಾ ಕಾಲುವೆಯ ನೀರು ಪೂರೈಕೆ ಜಾಕ್‌ವೆಲ್ ಕೇಂದ್ರಕ್ಕೆ ಮುತ್ತಿಗೆ ಹಾಕಿದ ಗ್ರಾಮಸ್ಥರು, ಏತ ನೀರಾವರಿ ಹಾಗೂ ಹನಿ ನೀರಾವರಿ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಸುಮಾರು ಐದು ಗಂಟೆಗಳ ಕಾಲ ಪ್ರತಿಭಟನೆ ನಡೆಯಿತು.

ಸ್ಥಳಕ್ಕೆ ಆಗಮಿಸಿದ ಹೂವಿನ ಹಡಗಲಿ ವಿಭಾಗದ ಏತ ನೀರಾವರಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಪ್ರಕಾಶ ಅವರೊಂದಿಗೆ ಪ್ರತಿಭಟನಾಕಾರರು ಚರ್ಚೆ ನಡೆಸಿ, ಲಕ್ಕುಂಡಿ ಗ್ರಾಮದ ರೈತರಿಗೆ ಆಗುತ್ತಿರುವ ತಾರತಮ್ಯದ ಕುರಿತು ತರಾಟೆಗೆ ತೆಗೆದುಕೊಂಡರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ತಾ.ಪಂ. ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ ಹಾಗೂ ಲಕ್ಕುಂಡಿ ಬಿಜೆಪಿ ಮಂಡಲದ ಅಧ್ಯಕ್ಷ ಪ್ರಕಾಶ ಅರಹುಣಶಿ ಮಾತನಾಡಿ, ಪ್ರಸಕ್ತ ವರ್ಷ ಮುಂಗಾರು ಹಾಗೂ ಹಿಂಗಾರು ಮಳೆ ಕೊರತೆಯಿಂದ ಹಳ್ಳ, ಕೊಳ್ಳ, ಕೆರೆ, ಬಾವಿಗಳಲ್ಲಿ ನೀರಿನ ಮಟ್ಟ ಕುಸಿದಿದೆ.

ಇದರಿಂದ ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ ಎಂದು ಹೇಳಿದರು.

ಎರಡು ತಿಂಗಳ ಹಿಂದೆಯೇ ನರಗುಂದ ಕ್ಷೇತ್ರದ ಶಾಸಕ ಸಿ.ಸಿ. ಪಾಟೀಲ ಅವರು ಅಧಿಕಾರಿಗಳಿಗೆ ದೂರವಾಣಿ ಮೂಲಕ ಕೆರೆಗಳಿಗೆ ನೀರು ಹರಿಸುವಂತೆ ಸೂಚಿಸಿದ್ದರೂ ಕ್ರಮ ಕೈಗೊಂಡಿಲ್ಲ. ಗ್ರಾಮದ ರೈತರು ಹಲವು ಬಾರಿ ಅಧಿಕಾರಿಗಳನ್ನು ಸಂಪರ್ಕಿಸಿ ಕಾಲುವೆಗೆ ನೀರು ಬಿಡುವಂತೆ ಮನವಿ ಮಾಡಿದರೂ ಸ್ಪಂದನೆ ಸಿಕ್ಕಿಲ್ಲ. ಮುಂಡರಗಿ ತಾಲೂಕಿನ ಕೆಲವು ಗ್ರಾಮಗಳ ಕೆರೆಗಳನ್ನು ಮಾತ್ರ ತುಂಬಿಸಲು ಕಾಲುವೆಗೆ ನೀರು ಹರಿಸಲಾಗುತ್ತಿದ್ದು, ಲಕ್ಕುಂಡಿ ಗ್ರಾಮದ ವಿಚಾರದಲ್ಲಿ ತಾರತಮ್ಯ ನೀತಿ ಅನುಸರಿಸಲಾಗುತ್ತಿದೆ ಎಂದು ಆರೋಪಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಕಾರ್ಯನಿರ್ವಾಹಕ ಅಭಿಯಂತರ ಪ್ರಕಾಶ ಅವರು ರೈತರೊಂದಿಗೆ ಚರ್ಚಿಸಿ, ಕೆಲವು ಪಂಪ್‌ಸೆಟ್‌ಗಳು ದುರಸ್ತಿಯಲ್ಲಿದ್ದ ಕಾರಣ ನೀರು ಹರಿಸುವಲ್ಲಿ ತೊಂದರೆಯಾಗಿತ್ತು. ಪೇಠಾಲೂರು, ಜಂತ್ಲಿ, ಲಕ್ಕುಂಡಿಯ ಹಾಲಗೊಂಡ ಬಸವೇಶ್ವರ, ದಂಡಿನ ದುರ್ಗಾದೇವಿ ಹಾಗೂ ಗದಗದ ಭೀಷ್ಮ ಕೆರೆಗಳನ್ನು ತುಂಬಿಸುವುದು ಬಾಕಿಯಿದೆ. ಸೋಮವಾರದಿಂದ ಈ ಎಲ್ಲ ಕೆರೆಗಳನ್ನು ತುಂಬಿಸಲು ಕಾಲುವೆಗೆ ನೀರು ಹರಿಸಲಾಗುವುದು ಎಂದು ಭರವಸೆ ನೀಡಿದರು. ಅಧಿಕಾರಿಗಳ ಭರವಸೆ ಬಳಿಕ ಗ್ರಾಮಸ್ಥರು ಪ್ರತಿಭಟನೆ ಹಿಂಪಡೆದರು.

ಪ್ರತಿಭಟನೆಯಲ್ಲಿ ಅಶೋಕ ಬೂದಿಹಾಳ, ಬಸವರಾಜ ಮುಳ್ಳಾಳ, ಮರಿಯಪ್ಪ ವಡ್ಡರ, ವೆಂಕಟೇಶ ದೊಂಗಡೆ, ಈರಣ್ಣ ಕಮತರ, ಕುಬೇರಗೌಡ ಪಾಟೀಲ, ಬಸನಗೌಡ ಪಾಟೀಲ, ಅಶೋಕ ಮಂದಾಲಿ, ಮಹಾಂತೇಶ ಹುಬ್ಬಳ್ಳಿ, ಚನ್ನಪ್ಪ ಹುಬ್ಬಳ್ಳಿ, ಮಂಜುನಾಥ ಕವಲೂರು ಸೇರಿದಂತೆ ಹಲವು ರೈತರು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

### ನಾಡಿಗೆ ಕಲಾವಿದರ ಕೊಡುಗೆ: ಪುಟ್ಟರಾಜ ಪುರಸ್ಕಾರ ಪ್ರದಾನ

# ಗವಾಯಿಗಳ ಕಲಾ ಬೆಳಕು ಅಮರ

**ವಿಜಯಸಾಕ್ಷಿ ಸುದ್ದಿ, ಗದಗ**

ಪೂಜ್ಯ ಪಂಡಿತ ಪುಟ್ಟರಾಜ ಗವಾಯಿಗಳು ನಾಡಿಗೆ ಅನೇಕ ಕಲಾವಿದರನ್ನು ರೂಪಿಸಿ, ಅವರ ಬದುಕಿಗೆ ಬೆಳಕಾದ ಮಹಾನ್ ಸಾಧಕರು ಎಂದು ಗದಗ ಮುಕ್ತಣ್ಣೇಶ್ವರ ಮಠದ ಶಂಕರಾನಂದ ಮಹಾಸ್ವಾಮಿಗಳು ಹೇಳಿದರು.




ನಗರದ ಗಾನ ಗಂಧರ್ವ ಕಲಾ ಟ್ರಸ್ಟ್‌ನ ನಾದಶ್ರೀ ಸಂಗೀತ ಪಾಠಶಾಲೆ ಆವರಣದಲ್ಲಿ ಆಯೋಜಿಸಿದ್ದ ಪೂಜ್ಯ ಲಿಂಗೈಕ್ಯ ಪಂಡಿತ ಪುಟ್ಟರಾಜ ಗವಾಯಿಗಳ 16ನೇ ಪುಣ್ಯಸ್ಮರಣೋತ್ಸವ, ನಾದಶ್ರೀ ಸಂಗೀತ ಪಾಠಶಾಲೆಯ ಮೂರನೇ ವಾರ್ಷಿಕೋತ್ಸವ ಹಾಗೂ ಪುಟ್ಟರಾಜ ಪುರಸ್ಕಾರ ಸಮಾರಂಭದ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಮಕ್ಕಳ ವ್ಯಕ್ತಿತ್ವ ನಿರ್ಮಾಣದಲ್ಲಿ ತಾಯಿ ಮತ್ತು ಗುರುವಿನ ಪಾತ್ರ ಮಹತ್ವದ್ದಾಗಿದೆ. ಸಂಗೀತದಂತಹ ಸಾಂಸ್ಕೃತಿಕ ಶಿಕ್ಷಣ ಮಕ್ಕಳಲ್ಲಿ ಸದಭಿರುಚಿ, ಶಿಸ್ತು ಹಾಗೂ ಉತ್ತಮ ವ್ಯಕ್ತಿತ್ವ ಬೆಳೆಸಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಮಾತನಾಡಿ, ಮಕ್ಕಳಲ್ಲಿ ಸದಭಿರುಚಿ ಬೆಳೆಸುವ ಸಂಗೀತ ಶಿಕ್ಷಣ ನೀಡುತ್ತಿರುವ ಗಾನ ಗಂಧರ್ವ ಕಲಾ ಟ್ರಸ್ಟ್‌ನ ಕಾರ್ಯ ಶ್ಲಾಘನೀಯ ಎಂದರು.

ಶ್ರೀ ಗುರು ಪುಟ್ಟರಾಜ ಪುರಸ್ಕಾರ ಶಿಕ್ಷಣ ಗೌರವ ಪ್ರಶಸ್ತಿಗೆ ಭಾಜನರಾದ ಜಯದೇವಿ ಏಕವಲ್ಲೂರ ಅವರು ಮಾತನಾಡಿ, ಮಕ್ಕಳ ಸಕಾರಾತ್ಮಕ ವ್ಯಕ್ತಿತ್ವ ರೂಪಿಸುವಲ್ಲಿ ಪೋಷಕರ ನಡವಳಿಕೆ ಅತ್ಯಂತ ಪ್ರಭಾವಶಾಲಿಯಾಗಿದೆ. ಪೋಷಕರು ಪ್ರತಿದಿನ ಕನಿಷ್ಠ ಅರ್ಧ ಗಂಟೆಯಾದರೂ ಮಕ್ಕಳೊಂದಿಗೆ ಬೆರೆಯಬೇಕು. ಮಕ್ಕಳ ಎದುರು ಜಗಳವಾಡಬಾರದು ಹಾಗೂ ಶಿಕ್ಷಕರ ಬಗ್ಗೆ ಕೀಳಾಗಿ ಮಾತನಾಡಬಾರದು ಎಂದು ಕಿವಿಮಾತು ಹೇಳಿದರು.

ಮುಖ್ಯ ಅತಿಥಿ ಮೂತ್ರರೋಗ ತಜ್ಞ ಡಾ. ಪ್ರವೀಣ ಡಂಬಳ ದೇಹದಾನದ ಮಹತ್ವ ತಿಳಿಸಿದರು.

ಭಾರತೀಯ ಕೌಶಲ್ಯಕಲೆಯನ್ನು ಮೆಚ್ಚಿ ಮಲೇಷಿಯಾದ ಉಗಾಂಡ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪಡೆದ ಪ್ರಸಾದ ಸೇವೆಯ ಸಿದ್ದರಾಮಯ್ಯ ಬಸವರಾಜ ಅಂಗಡಿ ಅವರನ್ನು ಹಾಗೂ ಟ್ರಸ್ಟ್‌ಗೆ ಹಾರ್ಮೋನಿಯಂ ಕಾಣಿಕೆ ನೀಡಿದ ಗಂಗಣ್ಣ ಬಿ. ಮಲ್ಲಾಡದ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಭಾಗ್ಯ ಶೇಖರಯ್ಯ ವಿಭೂತಿ ಅವರ ಮನಮೋಹಕ ಬಾನ್ಸುರಿ ವಾದನ, ಡಾ. ಹನುಮಂತ ಬಿ. ಹೂಗಾರ್ ಅವರ ತಬಲಾ ಸಾಥ್ ಹಾಗೂ ನಾದಶ್ರೀ ಸಂಗೀತ ಪಾಠಶಾಲೆಯ ಮಕ್ಕಳ ವಚನ ಗಾಯನ, ಅಕ್ಷಯ್ ಹೂಗಾರ್ ಅವರ ತಬಲಾ ಸಾಥ್‌ನೊಂದಿಗೆ ನಡೆದ ಭರತನಾಟ್ಯ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

> ಪುಟ್ಟರಾಜ ಗವಾಯಿಗಳು ನಾಡಿಗೆ ಅನೇಕ ಕಲಾವಿದರನ್ನು ನೀಡಿ, ಅವರ ಬದುಕಿಗೆ ಬೆಳಕಾಗಿದ್ದಾರೆ. ಅವರ ಕಲಾ ಪರಂಪರೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವುದು ನಮ್ಮೆಲ್ಲರ ಜವಾಬ್ದಾರಿ.
>
> – ಶಂಕರಾನಂದ ಮಹಾಸ್ವಾಮಿಗಳು, ಗದಗ ಮುಕ್ತಣ್ಣೇಶ್ವರ ಮಠ

ಸಿದ್ದಲಿಂಗಯ್ಯ ಶಾಸ್ತ್ರಿ ಗಡ್ಡದಮಠ ಸ್ವಾಗತಿಸಿದರು. ಶಿವಯೋಗಿ ಗಡ್ಡದಮಠ ನಿರೂಪಿಸಿದರು. ಶಿವಬಸಯ್ಯ ಗಡ್ಡದಮಠ ವಂದಿಸಿದರು.

### ಸೇವೆ, ಸಾಧನೆ ಸ್ಮರಣೆ ಸಮಾಜಕ್ಕೆ ಪ್ರೇರಣೆ: ಜಿ.ಎಸ್. ಗಡ್ಡದೇವರಮಠ

# ಹಿರಿಯರ ಬದುಕೇ ಪೀಳಿಗೆಗೆ ದಾರಿದೀಪ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಿರಿಯರು ತಮ್ಮ ಅನುಭವ, ಜ್ಞಾನ ಹಾಗೂ ಸಾಮಾಜಿಕ ಕಳಕಳಿಯ ಮೂಲಕ ಸಮಾಜ-ಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸುವುದರಿಂದ ಅವರ ಸೇವೆಯ ಮೌಲ್ಯ ಅರಿವಾಗುತ್ತದೆ. ಅವರ ಸೇವೆ, ಸಾಧನೆ ಹಾಗೂ ಆದರ್ಶಗಳು ಇಂದಿನ ಪೀಳಿಗೆಗೆ ಸದಾ ಮಾರ್ಗದರ್ಶಿಯಾಗಿವೆ ಎಂದು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಹೇಳಿದರು.

ಪಟ್ಟಣದ ಸೊಪ್ಪಿನಕೇರಿಯಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಭಾನುವಾರ ಆಯೋಜಿಸಿದ್ದ ಕಾಯಕನಿಷ್ಠ, ಧರ್ಮಚಿಂತಕ ಲಿಂ. ಮೆಕ್ಕಿ ಮು-ರಿಗೆಪ್ಪನವರ ಕುರಿತ 'ಮಾಸದ ಮಾತು' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮೆಕ್ಕಿ ಮುರಿಗೆಪ್ಪನವರ ಸರಳತೆ, ಕಾಯಕನಿಷ್ಠೆ ಹಾಗೂ ಸಮಾಜದೊಂದಿಗೆ ಹೊಂದಿದ್ದ ಆತ್ಮೀಯ ಸಂಬಂಧ ಸ್ಮರಣೀಯ.




ಪಟ್ಟಣದ ಅಭಿವೃದ್ಧಿ ಹಾಗೂ ಸಮಾಜಮುಖಿ ಕಾರ್ಯ ಗಳಲ್ಲಿ ಅವರ ಕೊಡುಗೆ ಅಪಾರವಾಗಿದೆ. ಸಮಾಜಕ್ಕೆ ತಮ್ಮನ್ನು ಸಮರ್ಪಿಸಿಕೊಂಡ ಇಂತಹ ಹಿರಿಯರ ಸೇವೆ ಮತ್ತು ಸಾಧನೆ ಗಳನ್ನು ಸ್ಮರಿಸುವುದು ಮುಂದಿನ ಪೀಳಿಗೆಗೆ ಪ್ರೇರಣೆಯಾ ಗಲಿದೆ ಎಂದರು. ಹಿರಿಯರ ಬದುಕು ಮತ್ತು ಸಾಧ ನೆಗಳನ್ನು ದಾಖಲಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯ ಮಹತ್ವದ್ದಾಗಿದೆ. ಇಂತಹ ಕಾರ್ಯಕ್ರಮಗಳು ಕೇವಲ ಸ್ಮರಣೆಗೆ ಸೀಮಿತವಾಗದೆ,

ಹಿರಿಯರು ತೋರಿದ ದಾರಿಯಲ್ಲಿ ಸಮಾಜವನ್ನು ಮುನ್ನಡೆಸುವ ಸಂಕಲ್ಪಕ್ಕೆ ವೇದಿಕೆಯಾಗಬೇಕು ಎಂದು ಹೇಳಿದರು.

ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಕೃಷಿ, ಶಿಕ್ಷಣ, ವ್ಯಾಪಾರ, ರಾಜಕೀಯ ಹಾಗೂ ಧಾರ್ಮಿಕ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಹಿರಿಯರ ಸಿದ್ಧಾಂತ,


> ಹಿರಿಯರ ಸೇವೆ, ಸಾಧನೆ ಮತ್ತು ಆದರ್ಶಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯ ಸಮಾಜಕ್ಕೆ ಹೊಸ ಪ್ರೇರಣೆ ನೀಡುತ್ತದೆ.
>
> – ಜಿ.ಎಸ್. ಗಡ್ಡದೇವರಮಠ, ಮಾಜಿ ಶಾಸಕ

ವಿಚಾರಧಾರೆ ಮತ್ತು ಆದರ್ಶಗಳು ಅವರು ನಮ್ಮೊಂದಿಗಿಲ್ಲದಿದ್ದರೂ ಎಂದೆಂದಿಗೂ ಪ್ರಸ್ತುತವಾಗಿರುತ್ತವೆ. ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ಮುನ್ನಡೆಯುವುದು ಇಂದಿನ ಪೀಳಿಗೆಯ ಜವಾಬ್ದಾರಿಯಾಗಿದೆ ಎಂದರು. ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿದ ಹಿರಿ ಯರು ಹಾಗೂ ಸಾಧಕರನ್ನು ಸ್ಮರಿಸುವ ಕಾರ್ಯವನ್ನು ಕನ್ನಡ ಸಾಹಿತ್ಯ ಪರಿಷತ್ತು ಕೈಗೊಂಡಿ ರುವುದು ಶ್ಲಾಘನೀಯ.

ಇಂತಹ ಕಾರ್ಯಕ್ರಮಗಳಿಂದ ಹಿರಿಯರ ಬದುಕು, ಸೇವೆ ಮತ್ತು ಸಾಧನೆ ಯುವಜನರಿಗೆ ಪರಿಚಯವಾಗುವುದರ ಜತೆಗೆ ಸಮಾಜಮುಖಿ ಕಾರ್ಯಗಳಿಗೆ ಪ್ರೇರಣೆ ದೊರೆಯಲಿದೆ ಎಂದು ಹೇಳಿದರು. ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾಜ ಸೇವಕಿ, ಧರ್ಮಾಭಿಮಾನಿ ಪಾರ್ವತಮ್ಮ ಮೆಕ್ಕಿ ಅವರನ್ನು ಸನ್ಮಾನಿಸಲಾಯಿತು.

ಆನಂದ ಮೆಕ್ಕಿ, ಸಿ.ಎಫ್. ಬೂದಿಹಾಳ, ಚನ್ನಪ್ಪ ಕೋಲಕಾರ, ಸುಭಾಸ ಓದುನವರ, ಕೆಂಚನಗೌಡ ಪಾಟೀಲ, ದೇವಣ್ಣ ಬಳಿಗಾರ, ಭರಮಪ್ಪ ಕೊಡ್ಲಿ, ಡಾ. ಎಸ್.ಜಿ. ಹೂವಿನ, ಚಂದ್ರಶೇಖರ ಮೆಕ್ಕಿ, ಮಂಜುನಾಥ ಚಾಕಲಬ್ಬಿ, ನಿಂಗಪ್ಪ ಬನ್ನಿ, ಈರಣ್ಣ ಗಾಣಿಗೇರ, ನಾಗರಾಜ ಮಜ್ಜಿಗುಡ್ಡ ಸೇರಿದಂತೆ ಹಿರಿಯರು, ಗಣ್ಯರು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾ-ರಿಗಳು ಉಪಸ್ಥಿತರಿದ್ದರು. ವಿಜಯ ಮೆಕ್ಕಿ ಸ್ವಾಗತಿಸಿದರು. ವರ್ಷಾ ಮೆಕ್ಕಿ ವಂದಿಸಿದರು. ಆರಾಧ್ಯ ಹಾಗೂ ಶ್ರದ್ಧಾ ಪ್ರಾರ್ಥಿಸಿದರು.

## ಮಹಾಮಠ ಸಮಿತಿ ನಿರ್ದೇಶಕರಾಗಿ ರವಿಕಾಂತ ಅಂಗಡಿ ಅವಿರೋಧ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸೇವಾಲಾಲ ನಗರದಲ್ಲಿರುವ ಶ್ರೀ ಸಂತ ಸೇವಾಲಾಲ ದೇವಸ್ಥಾನದಲ್ಲಿ ಭಾನುವಾರ ನಡೆದ ಶ್ರೀ ಸಂತ ಸೇವಾಲಾಲ ಜನ್ಮಸ್ಥಾನ ಮಹಾಮಠ ಸಮಿತಿ (ರಿ.) ಭಾಯಾಗಡ್-ಸೂರಗೊಂಡನಕೊಪ್ಪ, ಚಿನ್ನಿಕಟ್ಟೆ ಗ್ರಾಮ, ನ್ಯಾಮತಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಆಡಳಿತ ಮಂಡಳಿಯ ನಿರ್ದೇಶಕರ ಆಯ್ಕೆ ಪ್ರಕ್ರಿಯೆಯಲ್ಲಿ ಗದಗ ಜಿಲ್ಲಾ ನಿರ್ದೇಶಕರಾಗಿ ಗೋರಸೇನಾ (ಬಂಜಾರ) ರಾಜ್ಯಾಧ್ಯಕ್ಷ ಹಾಗೂ ವಕೀಲ ರವಿಕಾಂತ ಅಂಗಡಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಸಮಿತಿಯ ಗದಗ ಜಿಲ್ಲೆಯ ಸದಸ್ಯರ ಸಮ್ಮುಖದಲ್ಲಿ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ರವಿಕಾಂತ ಅಂಗಡಿ ಅವರ ಆಯ್ಕೆಯನ್ನು ಚುನಾವಣಾಧಿಕಾರಿ ರಾಘವೇಂದ್ರ ನಾಯ್ಕ ಅಧಿಕೃತವಾಗಿ ಘೋಷಿಸಿ ಪ್ರಮಾಣಪತ್ರ ವಿತರಿಸಿದರು.

ಚುನಾವಣಾ ಉಸ್ತುವಾರಿ ಕೆ.ಎಲ್. ಪೂಜಾರ, ಸಹಾಯಕ ಚುನಾವಣಾಧಿಕಾರಿಗಳಾದ ರವಿ ನಾಯ್ಕ, ವಿಕ್ರಮ್ ಹರಾವತ್ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕುಗಳ ಸಮಿತಿ ಪದಾಧಿಕಾರಿಗಳು, ಸದಸ್ಯರು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ನೂತನ ನಿರ್ದೇಶಕರಾಗಿ ಆಯ್ಕೆಯಾದ ರವಿಕಾಂತ ಅಂಗಡಿ ಅವರನ್ನು ಸದಸ್ಯರು ಹಾಗೂ ಸಮಾಜದ ಮುಖಂಡರು ಅಭಿನಂದಿಸಿದರು. ಸಮಾಜದ ಸಂಘಟನೆ, ಶೈಕ್ಷಣಿಕ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಅವರ ನೇತೃತ್ವ ಮತ್ತಷ್ಟು ಬಲ ನೀಡಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

# ಪಿಯು ಪರೀಕ್ಷಾ ಶುಲ್ಕ ಏರಿಕೆ: ಎಐಡಿಎಸ್‌ಒ ಆಕ್ರೋಶ

**ವಿಜಯಸಾಕ್ಷಿ ಸುದ್ದಿ, ಗದಗ**

ಪದವಿ ಪೂರ್ವ ಶಿಕ್ಷಣದ ವಿವಿಧ ಪರೀಕ್ಷಾ ಶುಲ್ಕಗಳನ್ನು ಏಕಾಏಕಿ ಶೇ.50ರಷ್ಟು ಹೆಚ್ಚಿಸಿರುವ ರಾಜ್ಯ ಸರ್ಕಾರದ ನಿರ್ಧಾರವನ್ನು ಖಂಡಿಸಿರುವ ಎಐಡಿಎಸ್‌ಒ, ಶುಲ್ಕ ಏರಿಕೆಯನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿದೆ. 2026–27ನೇ ಶೈಕ್ಷಣಿಕ ಸಾಲಿನಿಂದ ಪಿಯು ಪರೀಕ್ಷಾ ನೋಂದಣಿ, ಪ್ರಾಯೋಗಿಕ ಪರೀಕ್ಷೆ, ಅಂಕಪಟ್ಟಿ, ಮರುಮೌಲ್ಯಮಾಪನ ಸೇರಿದಂತೆ ವಿವಿಧ ಶುಲ್ಕಗಳನ್ನು ಹೆಚ್ಚಿಸಿರುವುದು ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಹೊರಿಸಿದೆ ಎಂದು ಎಐಡಿಎಸ್‌ಒ ಗದಗ ಜಿಲ್ಲಾ ಸಂಚಾಲಕಿ ಎಂ. ಶಾಂತಿ ತಿಳಿಸಿದ್ದಾರೆ.

ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆ ಹಾಗೂ ಆರ್ಥಿಕ ಸಂಕಷ್ಟದಿಂದ ಕುಟುಂಬಗಳು ತತ್ತ-ರಿಸಿರುವ ಸಂದರ್ಭದಲ್ಲಿ ಪರೀಕ್ಷಾ ಶುಲ್ಕ ಹೆಚ್ಚಳ ಮಾಡಿರುವುದು ವಿದ್ಯಾರ್ಥಿಗಳ ಶಿಕ್ಷಣದ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ. ಶಿಕ್ಷಣವನ್ನು ಪ್ರೋತ್ಸಾಹಿಸುವ ಬದಲು ವಿವಿಧ ಶುಲ್ಕಗಳನ್ನು ಹೆಚ್ಚಿಸಿರುವುದು ಸರಕಾರದ ವಿದ್ಯಾರ್ಥಿ ವಿರೋಧಿ ಧೋರಣೆಯನ್ನು ತೋರಿಸುತ್ತದೆ ಎಂದು ಅವರು ಹೇಳಿದ್ದಾರೆ.

ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ₹400ರಿಂದ ₹600ಕ್ಕೆ ಹೆಚ್ಚಿಸಲಾಗಿದೆ. ಒಂದು ವಿಷಯದ ಪರೀಕ್ಷಾ ಶುಲ್ಕ ₹140ರಿಂದ ₹210ಕ್ಕೆ, ಎರಡು ವಿಷಯಗಳ ಶುಲ್ಕ ₹270ರಿಂದ ₹405ಕ್ಕೆ ಹಾಗೂ ಮೂರು ಮತ್ತು ಅದಕ್ಕಿಂತ ಹೆಚ್ಚಿನ ವಿಷಯಗಳ

> ಶಿಕ್ಷಣದ ವೆಚ್ಚ ಹೆಚ್ಚಾದಷ್ಟೂ ಅದರ ಹೊರೆ ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳ ಮೇಲೆ ಬೀಳುತ್ತದೆ. ಶುಲ್ಕ ಏರಿಕೆಯ ಬದಲಿಗೆ ಎಲ್ಲ ವಿದ್ಯಾರ್ಥಿಗಳಿಗೂ ಕೈಗೆಟುಕುವ ಶಿಕ್ಷಣದ ವಾತಾವರಣವನ್ನು ಸರ್ಕಾರ ಕಲ್ಪಿಸಬೇಕು.
>
> – ಎಂ. ಶಾಂತಿ, ಜಿಲ್ಲಾ ಸಂಚಾಲಕಿ, ಎಐಡಿಎಸ್‌ಒ, ಗದಗ

ಶುಲ್ಕ ₹400ರಿಂದ ₹600ಕ್ಕೆ ಏರಿಕೆಯಾಗಿದೆ.

ದಂಡ ಶುಲ್ಕ ₹1,320ರಿಂದ ₹1,980ಕ್ಕೆ, ಪ್ರಾಯೋಗಿಕ ಪರೀಕ್ಷೆಯ ಪ್ರತಿ ವಿಷಯದ ಶುಲ್ಕ ₹110ರಿಂದ ₹165ಕ್ಕೆ, ಅಂಕಪಟ್ಟಿ ಶುಲ್ಕ ₹50ರಿಂದ ₹75ಕ್ಕೆ ಹಾಗೂ ಪರೀಕ್ಷಾ ಕೇಂದ್ರ ಬದಲಾವಣೆಯ ಶುಲ್ಕ ₹2,000ರಿಂದ ₹3,000ಕ್ಕೆ ಹೆಚ್ಚಿಸಲಾಗಿದೆ.

ಅಂಕಪಟ್ಟಿಯ ದ್ವಿತೀಯ ಪ್ರತಿಯ ಶುಲ್ಕ ₹1,600ರಿಂದ ₹2,400ಕ್ಕೆ, ತೃತೀಯ ಪ್ರತಿಯ ಶುಲ್ಕ ₹3,-170ರಿಂದ ₹4,755ಕ್ಕೆ ಹಾಗೂ ತತ್ಕಾಲ್ ಅಂಕಪಟ್ಟಿ ಪಡೆಯುವ ಶುಲ್ಕ ₹7,920ರಿಂದ ₹11,880ಕ್ಕೆ ಏರಿಕೆಯಾಗಿದೆ. ದ್ವಿತೀಯ ಪಿಯುಸಿ ಅಂಕಪಟ್ಟಿ ಪರಿಶೀಲನೆಗೆ ಹೊಸದಾಗಿ ₹2,000 ಶುಲ್ಕ ನಿಗದಿಪಡಿಸಲಾಗಿದೆ. ಪರೀಕ್ಷಾ ಅಂಕ ಸುಧಾರಣೆಗೆ ಪಾವತಿಸಬೇಕಾದ ಶುಲ್ಕವನ್ನು ₹262ರಿಂದ ₹525ಕ್ಕೆ ಹೆಚ್ಚಿಸಲಾಗಿದೆ ಎಂದು ಎಐಡಿ-ಎಸ್‌ಒ ತಿಳಿಸಿದೆ.

ಶುಲ್ಕ ಹೆಚ್ಚಳದಿಂದ ವಿಶೇಷವಾಗಿ ಬಡ ಹಾಗೂ ಗ್ರಾಮೀಣ ಕುಟುಂಬಗಳ ವಿದ್ಯಾರ್ಥಿಗಳಿಗೆ ಶಿಕ್ಷಣ ಮುಂದುವರಿಸುವುದು ಮತ್ತಷ್ಟು ಹೊರೆಯಾಗಬಹುದು. ಎಲ್ಲ ವಿದ್ಯಾರ್ಥಿಗಳಿಗೂ ಕೈಗೆಟುಕುವ ಶಿಕ್ಷಣದ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ರಾಜ್ಯ ಸರ್ಕಾರ ಕೂಡಲೇ ಶುಲ್ಕ ಹೆಚ್ಚಳದ ಆದೇಶವನ್ನು ಹಿಂಪಡೆದು, ಪರೀಕ್ಷಾ ಶುಲ್ಕ ಏರಿಕೆಯನ್ನು ಸಂಪೂರ್ಣವಾಗಿ ಕೈಬಿಡಬೇಕು ಎಂದು ಎಐಡಿಎಸ್‌ಒ ಆಗ್ರಹಿಸಿದೆ.

## ಸಂಸ್ಕೃತಿ ಉಳಿಸಲು ಮಕ್ಕಳಿಗೆ ಸಂಸ್ಕಾರ ಅಗತ್ಯ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ನಾಡಿನ ಸಂಸ್ಕೃತಿ ಮತ್ತು ಕಲೆಯನ್ನು ಉಳಿಸಿ, ಮುಂದಿನ ಪೀಳಿಗೆಗೆ ಕೊಡುಗೆಯಾಗಿ ನೀಡಲು ಮಕ್ಕಳಿಗೆ ನಮ್ಮ ಸಂಸ್ಕೃತಿ ಹಾಗೂ ಸಂಸ್ಕಾರಗಳ ಬಗ್ಗೆ ಸರಿಯಾದ ಅರಿವು ಮೂಡಿಸುವುದರ ಜತೆಗೆ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಮಾಡುವುದು ಅಗತ್ಯವಾಗಿದೆ ಎಂದು ನಿವೃತ್ತ ಶಿಕ್ಷಕಿ ಸಾವಿತ್ರಮ್ಮ ನೇಕಾರ ಹೇಳಿದರು.

ಪಟ್ಟಣದ ಶ್ರೀ ಸೋಮೇಶ್ವರ ನಗರದ ವಿಘ್ನೇಶ್ವರ ಯುವಕ ಮಂಡಳಿಯಿಂದ ಆಯೋಜಿಸಿದ್ದ ಮಹಿಳೆಯರ ರಂಗೋಲಿ ಹಾಗೂ ಮಕ್ಕಳ ಚಿತ್ರಕಲಾ ಸ್ಪರ್ಧೆ ಉದ್ಘಾಟಿಸಿ ಅವರು ಮಾತನಾಡಿದರು.

ರಂಗೋಲಿ ಹಾಗೂ ಚಿತ್ರಕಲೆ ಉತ್ತಮ ಕಲಾ ಪ್ರಕಾರಗಳಾಗಿವೆ. ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯ ನಡೆಯಬೇಕು. ಮಹಿಳೆಯರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಉತ್ತೇಜಿಸಲು ರಂಗೋಲಿ ಸ್ಪರ್ಧೆಗಳು ಸಹಕಾರಿಯಾಗುತ್ತವೆ. ರಂಗೋಲಿ ಭಾರತೀಯ ಸಂಸ್ಕೃತಿಯ ವಿಶೇಷ ಕಲೆಯಾಗಿದ್ದು, ಅದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ರಂಗೋಲಿ ಸ್ಪರ್ಧೆಯ ನಿರ್ಣಾಯಕರಾದ ಶಿಕ್ಷಕಿ ಗೀತಾ ಹಳ್ಯಾಳ ಹಾಗೂ ಅನಿತಾ ಬೆನ್ನಾಳ ಮಾತನಾಡಿ, ರಂಗೋಲಿ ಭಾರತೀಯ ಸಂಸ್ಕೃತಿಯ ಪ್ರತೀಕವಾಗಿದೆ. ಮಹಿಳೆಯರು ರಂಗೋಲಿ ಕಲೆಯನ್ನು ಉಳಿಸಿ ಬೆಳೆಸುವ ಕಾರ್ಯಕ್ಕೆ ಮುಂದಾಗಬೇಕು ಎಂದರು.

ವಿವಿಧ ಬಣ್ಣಗಳಿಂದ ಬಿಡಿಸಿದ ಆಕರ್ಷಕ ರಂಗೋಲಿಗಳು ಹಾಗೂ ಮಕ್ಕಳ ಚಿತ್ರಕಲಾ ಸ್ಪರ್ಧೆಯ ಕಲಾಕೃತಿಗಳು ನೋಡುಗರ ಗಮನ ಸೆಳೆದವು.

ರೂಪಾ ಗೌಳಿ, ವಿಜಯಲಕ್ಷ್ಮಿ ನೇಕಾರ, ಪೂರ್ಣಿಮಾ ನೇಕಾರ, ತೇಜಸ್ವಿನಿ ನೇಕಾರ, ಪೂಜಾ ಕರ್ಜಗಿ, ಗೀತಾ ಭಟ್, ಗೌರಮ್ಮ ದೊಡ್ಡಮನಿ, ಕೋಮಲ ಬಾಕಳೆ, ಕೀರ್ತಿ ಯರ್ಲಗಟ್ಟಿ, ವಿನುತಾ ಅರಳಿ, ಕೋಮಲ ದಾನಿ, ಜ್ಯೋತಿ ಭೋವಿ, ಜಯಶ್ರೀ ನಡುವಿನಹಳ್ಳಿ ಸೇರಿದಂತೆ ಹಲವರು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.

ಚಂದ್ರಣ್ಣ ಯರ್ಲಗಟ್ಟಿ, ಶಿವಣ್ಣ ದೊಡ್ಡಮನಿ, ಚಂದ್ರಕಾಂತ ಘಾಟಗೆ, ನಿಂಗಪ್ಪ ಪಾಟೀಲ, ಉಮೇಶ ನೇಕಾರ, ಚಂದ್ರಕಾಂತ ನೇಕಾರ, ಪಂಚಾಕ್ಷರಯ್ಯ ಕಡ್ಲಿಬಾಳಮಠ, ಈಶ್ವರ ಅಂಗಡಿ, ಪ್ರಕಾಶ ನಡುವಿನಹಳ್ಳಿ, ನಂದಾ ಧರ್ಮಾಯುತ್, ಪ್ರಜ್ವಲ ಯರ್ಲಗಟ್ಟಿ, ಜಯಲಕ್ಷ್ಮಿ ಗುಡಗೇರಿ, ಮಹಾದೇವಮ್ಮ ಬೋವಿ, ನೀಲವ್ವ ಹೊಂಬಳ, ರಘುನಾಥ ದಾನಿ ಸೇರಿದಂತೆ ಅನೇಕರು, ಯುವಕ-ಯುವತಿಯರು ಉಪಸ್ಥಿತರಿದ್ದರು.

ಗಿರೀಶ ನೇಕಾರ ಕಾರ್ಯಕ್ರಮ ನಿರ್ವಹಿಸಿದರು.

## ಕ್ರೀಡಾಕೂಟದಲ್ಲಿ ಬಿ.ಎಂ.ಎಸ್. ವಿದ್ಯಾರ್ಥಿಗಳ ಸಾಧನೆ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದಲ್ಲಿ ಇತ್ತೀಚೆಗೆ ನಡೆದ ಪ್ರಾಥಮಿಕ ಶಾಲಾ ಕ್ರೀಡಾಕೂಟದಲ್ಲಿ ಮುಳಗುಂದದ ಬಿ.ಎಂ.ಎಸ್. ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ವಿವಿಧ ವಿಭಾಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಬಾಲಕರ ರಿಲೇ, ವಾಲಿಬಾಲ್, ಕಬಡ್ಡಿ ಹಾಗೂ ಖೋಖೋದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಬಾಲಕಿಯರ ವಾಲಿಬಾಲ್‌ನಲ್ಲಿ ಪ್ರಥಮ ಹಾಗೂ ಖೋಖೋದಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ.

ವೈಯಕ್ತಿಕ ವಿಭಾಗಗಳಲ್ಲೂ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದು, ಗುಂಡು ಎಸೆತ, ಚಕ್ರ ಎಸೆತ, 400 ಮೀ. ಓಟ, 200 ಮೀ. ಓಟ ಹಾಗೂ ಉದ್ದ ಜಿಗಿ-ತದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಬಾಲಕಿಯರ ಗುಂಡು ಎಸೆತದಲ್ಲೂ ಪ್ರಥಮ ಸ್ಥಾನ ಗಳಿಸಿದ್ದಾರೆ.

ಅತ್ಯುತ್ತಮ ಸಾಧನೆಯ ಮೂಲಕ ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳನ್ನು ದೈಹಿಕ ಶಿಕ್ಷಕಿ, ಮುಖ್ಯೋಪಾಧ್ಯಾಯರು ಹಾಗೂ ಆಡಳಿತ ಮಂಡಳಿ ಸನ್ಮಾನಿಸಿ ಗೌರವಿಸಿದರು.

# ನೇಕಾರರ ಸಂಘಕ್ಕೆ ₹7.66 ಲಕ್ಷ ಲಾಭ

**ವಿಜಯಸಾಕ್ಷಿ ಸುದ್ದಿ, ಗದಗ**

ನೇಕಾರರ ಪತ್ತಿನ ಸಹಕಾರ ಸಂಘವು 2025–26ನೇ ಸಾಲಿನಲ್ಲಿ ₹7.66 ಲಕ್ಷಕ್ಕೂ ಅಧಿಕ ಲಾಭ ಗಳಿಸಿದ್ದು, ಶೇರುದಾರ ನೇಕಾರ-ರಿಗೆ ಶೇ.10ರಷ್ಟು ಡಿವಿಡೆಂಡ್ ನೀಡಲಾಗುವುದು ಎಂದು ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ತಿಳಿಸಿದರು.

ಬೆಟಗೇರಿಯ ಹೊಸ ಬನಶಂಕರಿ ದೇವಸ್ಥಾನದ ಸಭಾಂಗಣದಲ್ಲಿ ಭಾನುವಾರ ನಡೆದ ಸಂಘದ 15ನೇ ವಾರ್ಷಿಕ ಸರ್ವಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2011ರಲ್ಲಿ 380 ಸದಸ್ಯರೊಂದಿಗೆ ಆರಂಭವಾದ ಸಂಘವು ಇದೀಗ 847 ಸದಸ್ಯರನ್ನು ಹೊಂದಿದೆ. ನೇಕಾರರಿಗೆ ವಿವಿಧ ಸಾಲ ಸೌಲಭ್ಯಗಳನ್ನು ಒದಗಿಸುವ ಮೂಲಕ ಆರ್ಥಿಕವಾಗಿ ಸಬಲಗೊಳಿಸಲು ಸಂಘ ಶ್ರಮಿಸುತ್ತಿದೆ ಎಂದರು.

ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕ ಅಜೀತ ನಾಯಕ ನೇಕಾರರಿಗೆ ಲಭ್ಯವಿರುವ ಸರ್ಕಾರಿ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಸಂಘದ ಉಪಾಧ್ಯಕ್ಷ ವಿಜಯ ಕುಮಾರ ಕಬಾಡಿ ಹಾಗೂ ಹಿರಿಯ ನಿರ್ದೇಶಕ ಅಮರೇಶ ಚಾಗಿ ಮಾತನಾಡಿದರು. ಸಂಘದ ಸದಸ್ಯರ ಮಕ್ಕಳಾದ ಸಿರಿ ಕುಣಗೇರಿ, ಸಚಿನ್ ಜನಿವಾರದ, ವೇದಾ ಢಾಣೆ, ಚರಣ ಶಿರಹಟ್ಟಿ, ಅಶ್ವಿನಿ ಗಂಜಿ, ಅವಿನಾಶ ಐಲಿ ಹಾಗೂ ಸ್ಫೂರ್ತಿ ಗಂಜಿ ಅವರನ್ನು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಉತ್ತಮ ವ್ಯವಹಾರ ಬಾಂಧವ್ಯ ಹೊಂದಿದ ಸದಸ್ಯರಾದ ಮಲ್ಲಿಕಾರ್ಜುನ ಕುದರಿ, ಮಹೇಶ ಮಿಟ್ಟಿ ಸೇರಿದಂತೆ ಆರು ಸದಸ್ಯರನ್ನು ಸನ್ಮಾನಿಸಲಾಯಿತು.

ಸ್ವಂತ ಕಟ್ಟಡ ನಿರ್ಮಾಣ-ಕ್ಕಾಗಿ ಮಧ್ಯವರ್ತಿ ಸ್ಥಳದಲ್ಲಿ ಜಾಗ ಗುರುತಿಸಲಾಗುತ್ತಿದೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದರು. ನೇಕಾರರು ಹಾಗೂ ಜವಳಿ ಉದ್ಯಮಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.




# ಮೈಲಾರಲಿಂಗನ ರೂಪಕಕ್ಕೆ ಮನಸೋತ ಜನರು

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ನಾಲ್ವಾಡದವರ ಓಣಿಯ ಗದಗ ಕಾ ರಾಜಾ ಶ್ರೀ ಗಜಾನನೋತ್ಸವ ಸಮಿತಿಯ 50ನೇ ವರ್ಷದ ಗಣೇಶೋತ್ಸವಕ್ಕೆ ಶ್ರೀ ಮೈಲಾರಲಿಂಗೇಶ್ವರ ರೂಪಕ ದೈವಿಕ ಮೆರುಗು ತಂದಿದ್ದು, ಭಕ್ತರು ಹಾಗೂ ಸಾರ್ವಜನಿಕರ ಗಮನ ಸೆಳೆಯುತ್ತಿದೆ.

ಗಣೇಶೋತ್ಸವದ ಅಂಗವಾಗಿ ಸಮಿತಿ ಹಮ್ಮಿಕೊಂಡಿರುವ ವಿಶೇಷ ರೂಪಕದಲ್ಲಿ ಮಣಿ-ಮಲ್ಲಾಸುರ ರಾಕ್ಷಸರ ಸಂಹಾರಕ್ಕಾಗಿ ಪರಶಿವನು ಮಾರ್ತಾಂಡ ಭೈರವನಾಗಿ ಹಾಗೂ ಪಾರ್ವತಿ ದೇವಿಯು ಗಂಗೆ ಮಾಳವ್ವಳಾಗಿ ಭೂಲೋಕಕ್ಕೆ ಅವತರಿಸಿದ ಪೌರಾಣಿಕ ಕಥ-ಾಹಂದರವನ್ನು ದೃಶ್ಯರೂಪದಲ್ಲಿ ಕಟ್ಟಿಕೊಡಲಾಗಿದೆ.




ಗೊರವರ ಭಕ್ತಿಭಾವ, ಡಮರುಗದ ನಾದ ಹಾಗೂ ಸಾಂಪ್ರದಾಯಿಕ ಆರಾಧನಾ ದೃಶ್ಯಗಳು ರೂಪಕದ ಪ್ರಮುಖ ಆಕರ್ಷಣೆಯಾಗಿವೆ. ನಾಲ್ವಾಡದ ಓಣಿಯ ವಾತಾವರಣವೇ ಮೈಲಾರಲಿಂಗನ ಜಯಘೋಷ ದಿಂದ ಮಾರ್ದನಿ ಸುತ್ತಿದೆ.

ಪೌರಾಣಿಕ ಪರಂಪರೆ, ಭಕ್ತಿ ಹಾಗೂ ಜನಪದ ಸಂಸ್ಕೃತಿಯ ಸೊಗಡನ್ನು ರೂಪಕದ ಮೂಲಕ ಪರಿಣಾಮಕಾರಿಯಾಗಿ ಅನಾವರಣಗೊಳಿಸಲಾಗಿದೆ.

ನಾಲ್ವಾಡ ಓಣಿಯ ಗುರುಹಿ-ರಿಯರ ಮಾರ್ಗದರ್ಶನದಲ್ಲಿ ಯುವಕರ ತಂಡ ಕಳೆದ ಒಂದು ತಿಂಗಳಿಂದ ರೂಪಕದ ಸಿದ್ಧತೆಯಲ್ಲಿ ತೊಡಗಿಸಿಕೊಂಡಿದೆ.

ಮಂಜುನಾಥ ಮುಧೋಳ ಅವರ ಸಾರಥ್ಯದಲ್ಲಿ ಯುವಕರ ತಂಡ ಶ್ರಮಿಸಿದ್ದು, 50ನೇ ವರ್ಷದ ಗಣೇಶೋತ್ಸವಕ್ಕೆ ರೂಪಕ ವಿಶೇಷ ಆಕರ್ಷಣೆಯಾಗಿದೆ.

ಶ್ರೀ ಮೈಲಾರಲಿಂಗೇಶ್ವರ ರೂಪಕದ ದೃಶ್ಯಾವಳಿ ಪ್ರದರ್ಶನ ಸೆ. 24ರಂದು ಮುಕ್ತಾಯಗೊಳ್ಳಲಿದ್ದು, ಗಣೇಶ ವಿಸರ್ಜನೆ ಮೆರವಣಿಗೆ ಸೆ. 25ರಂದು ನಡೆಯಲಿದೆ.

# ಮಕ್ಕಳ ಭವಿಷ್ಯಕ್ಕೆ ಪಾಲಕರ ನಿಗಾ ಮುಖ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಆಂಗ್ಲೋ ಉರ್ದು ಬಾಲಕರ ಹಾಗೂ ಬಾಲಕಿಯರ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿ ಕುರಿತು ಚರ್ಚಿಸಲು ಭಾನುವಾರ ಪಾಲಕರ ಸಭೆ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸರ್ಫರಾಜ ಅಹ್ಮದ ಎಸ್. ಉಮಚಗಿ ಮಾತನಾಡಿ, ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಪಾಲಕರ ಪಾತ್ರ ಮಹತ್ವದ್ದಾಗಿದೆ.

ಶಿಕ್ಷಕರು ನೀಡಿದ ಪಾಠಗಳನ್ನು ಮಕ್ಕಳು ಮನೆಯಲ್ಲಿ ಅಭ್ಯಾಸ ಮಾಡುತ್ತಿದ್ದಾರೆಯೇ ಎಂಬುದನ್ನು ಪಾಲಕರು ಗಮನಿಸಬೇಕು.

ಮಕ್ಕಳನ್ನು ಮೊಬೈಲ್ ಹಾಗೂ ದೂರದರ್ಶನದಿಂದ ದೂರವಿಡಬೇಕು ಎಂದು ಸಲಹೆ ನೀಡಿದರು.




ಸಂಸ್ಥೆಯ ನಿರ್ದೇಶಕ ಪ್ರೊ. ಎ.ಎಂ. ಮುಲ್ಲಾ ಮಾತನಾಡಿ, ಮಕ್ಕಳು ತಮ್ಮ ಗುರಿ ತಲುಪಲು ವಿದ್ಯಾರ್ಥಿ, ಪಾಲಕ ಹಾಗೂ ಶಿಕ್ಷಕರ ನಡುವೆ ಉತ್ತಮ ಹೊಂದಾಣಿಕೆ ಅಗತ್ಯ ಎಂದರು.

ಸದಸ್ಯ ಎಸ್.ಎ. ಬಿಜಾಪುರ ಮಾತನಾಡಿ, ಜ್ಞಾನಕ್ಕೆ ಜಗತ್ತಿನಲ್ಲಿ ಅತ್ಯಂತ ಹೆಚ್ಚಿನ ಬೆಲೆ ಇದೆ. ಆದ್ದ-ರಿಂದ ಪಾಲಕರು ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಿಸುವತ್ತ ಗಮನಹ-ರಿಸಬೇಕು ಎಂದು ಹೇಳಿದರು.

ಪಾಲಕ ಮೌಲಾನಾ ಮೊಹ್ಮದ ಅಲಿ ಶಿಕ್ಷಣದ ಮಹತ್ವವನ್ನು ದೃಷ್ಟಾಂತಗಳ ಮೂಲಕ ವಿವ-ರಿಸಿದರು. ಶಾಕೀರ ಕಾತರ್ಕಿ, ಶರಿಫಸಾಬ ಬಳ್ಳಾರಿ ಹಾಗೂ ಮೆಹಬೂಬ ಸಾಬ ಅತ್ತಾರ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಉಪಾಧ್ಯಕ್ಷ ಎ.ಎಂ. ಸೌದಾಗರ, ಕಾರ್ಯದರ್ಶಿ ಎಂ.ಎಂ. ಶೇಖ, ಸದಸ್ಯರಾದ ಆರ್.ಎಲ್. ಬಾಗಲಕೋಟ, ಶಹನವಾಜ ಎಸ್. ಉಮಚಗಿ, ಕೆ.ಎಂ. ಶೇಖ, ಜೆ.ಬಿ. ಉಮಚಗಿ, ಎಂ.ಎ. ಹಣಗಿ, ಶಾಮಾಜ ಎಸ್. ಉಮಚಗಿ, ಎರಡೂ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ಪಾಲಕರು ಉಪಸ್ಥಿತರಿದ್ದರು. ಶಿಕ್ಷಕಿ ನಫೀಸಾ ಕದಡಿ ನಿರೂಪಿಸಿದರು. ಮುಖ್ಯೋಪಾಧ್ಯಾಯ ಎಲ್.ಆರ್. ಇಟಗಿ ಸ್ವಾಗತಿಸಿದರು. ಎಂ.ಎ. ರಿಕಾರ್ಟಿ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka